ವಿಜಯಪುರ | ಸಂಪುಟ 04 | ಸಂಚಿಕೆ 154 | ಪುಟ 04 | ₹ 3.00
https://udayarashminews.com
udayarashmi 90088 88340

# ಉದಯ ರಶ್ಮಿ

Udayarashmi Kannada Daily
ಜನಪರ-ಜೀವಪರ
ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ
Editor: Indushekhar Manur

editor.udayarashmi@gmail.com RNI NO: KARKAN/2023/86203 ರವಿವಾರ, ಆಗಸ್ಟ್, 09, 2026



"ಕುಮಾರಸ್ವಾಮಿ ಅವರೇ ತಂದ ಯೋಜನೆ ವಿರೋಧಿಸಿ ಅವರೇ ಪಾದಯಾತ್ರೆ ಮಾಡುತ್ತಿದ್ದಾರೆ. ಬಿಡದಿ ಟೌನ್‌ಶಿಪ್ ಯೋಜನೆಯನ್ನು ಆರಂಭಿಸಿದ್ದೇ ಕುಮಾರಸ್ವಾಮಿ. ಈ ಯೋಜನೆ ಮಾಡಿ ಎಂದು ಯಾರಾದರೂ ಅವರನ್ನು ಕೇಳಿದ್ದರಾ?

■ ಎಚ್.ಸಿ.ಬಾಲಕೃಷ್ಣ
ಸಚಿವರು

# ಆನ್ ಲೈನ್–ಆಫ್ ಲೈನ್ ಮಾರುಕಟ್ಟೆ: ಒಣದ್ರಾಕ್ಷಿ ವಹಿವಾಟು ಭಾರಿ ಏರಿಕೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ರೈತರ ಹಿತದೃಷ್ಟಿಯಿಂದ ಪಾರದರ್ಶಕ ವಹಿವಾಟಿಗಾಗಿ ಆರಂಭಿಸಲಾದ ಆನ್ ಲೈನ್ ಟ್ರೇಡಿಂಗ್ ಮಾರುಕಟ್ಟೆಗೆ ಆದ್ಯತೆ ಕಲ್ಪಿಸಲು ಈಚೆಗೆ ಸಭೆ ನಡೆಸಿ, ಸೂಚನೆ ನೀಡಿದ ನಂತರ ನಡೆದ ಒಣದ್ರಾಕ್ಷಿ ವಹಿವಾಟಿನಲ್ಲಿ ಈವರೆಗೆ ನಡೆಯುತ್ತಿದ್ದ ಸರಾಸರಿ ರೂ.5 ಕೋಟಿ ಯಿಂದ ರೂ.12 ಕೋಟಿಗೆ ಭಾರಿ ಏರಿಕೆ ಆಗಿರುವುದು ಒಳ್ಳೆಯ ಬೆಳವಣಿಗೆ ಎಂದು ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳರು ತಿಳಿಸಿದ್ದಾರೆ.

ವಿಜಯಪುರ ನಗರದಲ್ಲಿ ಒಣದ್ರಾಕ್ಷಿ ಆನಲೈನ್ ಟ್ರೇಡಿಂಗ್ ಮಾರುಕಟ್ಟೆ ಆರಂಭಗೊಂಡರೂ, ಕೆಲ ವ್ಯಕ್ತಿಗಳು ಖಾಸಗಿ ಅಸೋಷಿಯನ್ ರಚಿಸಿ, ಎಪಿ–ಎಂಸಿಗೆ ಸಂಬಂಧವೇ ಇಲ್ಲದಂತೆ ತಮ್ಮದೆಯಾದ ನಿಯಮಾವಳಿಗಳನ್ನು ಮಾಡಿಕೊಂಡು, ಕೆಲವೇ ಕೆಲವು ವ್ಯಕ್ತಿಗಳು ಹರಾಜ್ ದಲ್ಲಿ ಭಾಗವಹಿಸಿ ಮನಸ್ಸಿಗೆ ಬಂದ ದರದಲ್ಲಿ ಖರೀದಿ ಮಾಡಿಕೊಂಡು ರೈತರಿಗೆ ವಂಚನೆ ಮಾಡಲಾಗುತ್ತಿತ್ತು. ಅಲ್ಲದೇ, ತಮ್ಮ ಕೋಲ್ಡ್ ಸ್ಟೋರೇಜ್ ಗಳಲ್ಲಿ ರೈತರು ತಂದಿಡುವ ಉತ್ಪನ್ನಗಳಿಗೆ ಬಾಡಿಗೆ ಪಡೆದುಕೊಳ್ಳುವುದಲ್ಲದೇ, ಮಾರಾಟದ ಬಳಿಕ ಶೇ 2 ರಷ್ಟು ಕಮಿಷನ್ ಸಹ ವಸೂಲಿ ಮಾಡುತ್ತಿದ್ದರು. ಇದರಿಂದ ರೈತರಿಗೆ ಸೂಕ್ತ ಬೆಲೆ ಮತ್ತು ವಿನಾಕಾರಣ ಕಮಿಷನ್ ನೀಡುತ್ತಿದ್ದರಿಂದ ನಷ್ಟ ಉಂಟಾಗುತ್ತಿತ್ತು. ಅಲ್ಲದೇ ತೂಕದಲ್ಲಿಯೂ ವ್ಯತ್ಯಾಸವಾಗುತ್ತಿತ್ತು.ಇದಕ್ಕೆ ಕಡಿವಾಣ ಹಾಕಲು ಈಚೆಗೆ (ಜುಲೈ 28) ಎಪಿಎಂಸಿ ಪ್ರಾಂಗಣದಲ್ಲಿ ದ್ರಾಕ್ಷಿ ಬೆಳೆಗಾರರು ಹಾಗೂ ಎಪಿಎಂಸಿ ಅಧಿಕಾ–ರಿಗಳೊಂದಿಗೆ ಸಭೆ ನಡೆಸಿ, ಆನ್ ಲೈನ್ ಟ್ರೇಡಿಂಗ್ ಮಾರುಕಟ್ಟೆಗೆ ಆದ್ಯತೆ ನೀಡಲು ಕಡ್ಡಾಯವಾಗಿ ವಾರದಲ್ಲಿ ಎರಡು ಭಾರಿ ಆನಲೈನ್ ಟ್ರೇಡಿಂಗ್ ಮಾರುಕಟ್ಟೆಯಲ್ಲೇ ಒಣದ್ರಾಕ್ಷಿ ವಹಿವಾಟು ನಡೆಸಲು ಸರ್ವಾನುಮತದಿಂದ ತಿರ್ಮಾನಿಸಲಾಗಿತ್ತು.

ಅದಾದ ಬಳಿಕ ಶನಿವಾರ (ಆ.1) ನಡೆದ ಆನಲೈನ್ ಮಾರುಕಟ್ಟೆ ಪ್ರಕ್ರಿಯೆಯಲ್ಲಿ 4,59 ಲಕ್ಷ ಕೆ.ಜಿ ಒಣದ್ರಾಕ್ಷಿ ವಹಿವಾಟು ನಡೆದಿದ್ದು, ಇದಕ್ಕೂ ಮೊದಲೂ ಕೇವಲ 2.17 ಲಕ್ಷ ಕೆ.ಜಿ ವಹಿವಾಟು ದಾಖಲಾಗಿತ್ತು. ದರದಲ್ಲಿಯೂ ಏರಿಕೆ ಕಂಡಿದ್ದು, ಪ್ರತಿ ಕೆ.ಜಿ ಒಣದ್ರಾಕ್ಷಿ ಗ–ರಿಷ್ಠ ರೂ. 390 ವರೆಗೆ ಮಾರಾಟವಾಗಿದೆ. ಈ ಪ್ರಕ್ರಿಯೆಯಲ್ಲಿ ಇಲ್ಲಿಯವರೆಗೆ ಭಾಗವಹಿಸುತ್ತಿದ್ದ ಖರೀದಿದಾರರ ಸಂಖ್ಯೆ 14 ರಿಂದ 25ಕ್ಕೆ ಹೆಚ್ಚಳವಾಗಿದೆ. ದಲ್ಲಾಳಿಗಳ ಸಂಖ್ಯೆ 5 ರಿಂದ 15ಕ್ಕೆ ಅಧಿಕವಾಗಿದೆ. ಈ ಬೆಳವಣಿಗೆಯಿಂದ ರೈತರಿಗೆ ಈವರೆಗೆ ಆಗುತ್ತಿದ್ದ ತೂಕದಲ್ಲಿ ಮೋಸ, ಬೆಲೆಯಲ್ಲಿ ವ್ಯತ್ಯಾಸ, ಆಕ್ಷನ್ ನೆಪದಲ್ಲಿ ತೂರಾಟ ನಡೆಸಿ ಅನಾವಶ್ಯಕವಾಗಿ ಉತ್ಪನ್ನ ಹಾಳಾಗುತ್ತಿರುವುದು ತಪ್ಪಿದಂತಾಗಿದೆ.

ಖಾಸಗಿಯವರು ನಡೆಸುತ್ತಿದ್ದ ಬಹಿರಂಗ ಹರಾಜಿನಲ್ಲೇ ಹೆಚ್ಚಿನ ಪ್ರಮಾಣದಲ್ಲಿ ವಹಿವಾಟು ಆಗುತ್ತಿರುವುದರಿಂದ ಯಾವುದೇ ನಿಕರವಾದ ಮಾಹಿತಿಯೂ ದೊರೆಯದೇ, ಸರ್ಕಾರಕ್ಕೆ ಸೆಸ್ ಮತ್ತು ಜಿ.ಎಸ್.ಟಿ ಮೂಲಕ ಬರಬೇಕಿದ್ದ ಆದಾಯ ಸಹ ಕೈ ತಪ್ಪುತ್ತಿತ್ತು. ಈಗ ಆನ್ ಲೈನ್ ಮಾರುಕಟ್ಟೆಯಲ್ಲೇ ಹೆಚ್ಚಿನ ವಹಿವಾಟು ನಡೆಯುತ್ತಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಆದಾಯ ಹರಿದು ಬರಲಿದೆ.

ಎಲ್ಲ ದ್ರಾಕ್ಷಿ ಬೆಳೆಯುವ ರೈತರು ಯಾರ ಲಾಭಿಗೂ ಮಣಿಯದೇ ನಿರಾಂತಕವಾಗಿ ದೊರೆತ ಇಂತಹ ಅವಕಾಶವನ್ನು ಹೆಚ್ಚು ಜನ–ರಿಗೆ ಪ್ರಚುರಪಡಿಸಿ, ಆನಲೈನ್ ಮಾರುಕಟ್ಟೆಯಲ್ಲಿ ಭಾಗವಹಿಸಲು ಪ್ರೇರೆಪಿಸಿದಲ್ಲಿ, ಇಲಾಖೆಗೂ ಆದಾಯ ಮತ್ತು ರೈತರಿಗೂ ಅತೀ ಹೆಚ್ಚು ಲಾಭ ದೊರೆಯಲಿದೆ. ದೇಶದ ಯಾವುದೇ ರಾಜ್ಯದ ವರ್ತಕರು ಆನಲೈನ್ ಮತ್ತು ತಾತ್ಕಾಲಿಕವಾಗಿ ನಡೆಯುವ ಆಫ್ ಲೈನ್ ಮಾರುಕಟ್ಟೆ ವಹಿವಾಟಿನಲ್ಲಿ ಭಾಗವಹಿಸಲು ಅವಕಾಶವಿದ್ದು, ಪ್ರತಿಯೊಬ್ಬರೂ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದ್ದಾರೆ.

# ಸಮುದಾಯ ಆರೋಗ್ಯ ಕೇಂದ್ರ ಆರಂಭಕ್ಕೆ ಆಗ್ರಹಿಸಿ ಮನವಿ



■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರವನ್ನು ಕೂಡಲೇ ಆರಂಭಿಸುವಂತೆ ಆಗ್ರಹಿಸಿ ನಮ್ಮ ಕರ್ನಾಟಕ ಸೇನೆಯ ಪದಾಧಿಕಾ–ರಿಗಳು ತಹಶೀಲ್ದಾರ ನಿಂಗಣ್ಣ ಬಿರಾದಾರ ಅವರಿಗೆ ಮನವಿ ಸಲ್ಲಿಸಿದರು.

ತಹಶೀಲ್ದಾರರನ್ನು ಶುಕ್ರವಾರ ಭೇಟಿ ಮಾಡಿದ ನಮ್ಮ ಕರ್ನಾಟಕ ಸೇನೆಯ ಪದಾಧಿಕಾರಿಗಳು ಸಮುದಾಯ ಆರೋಗ್ಯ ಕೇಂದ್ರದ ಆರಂಭದ ಕು–ರಿತು ಗಮನ ಸೆಳೆದರು.

ಈ ಸಂದರ್ಭದಲ್ಲಿ ತಾಲ್ಲೂಕು ಘಟಕದ ಅಧ್ಯಕ್ಷ ಹಸನ್ ನದಾಫ್ ಮಾತನಾಡಿ, ಪಟ್ಟಣದ ಹೊಸನಗರದಲ್ಲಿನ ಸಿಎಚ್‌ಸಿಯನ್ನು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಮತ್ತು ಕ್ಷೇತ್ರದ ಶಾಸಕ ರಾಜುಗೌಡ ಪಾಟೀಲ(ಕುದರಿ ಸಾಲವಾಡಗಿ) ಸುಮಾರು ಮೂರು ತಿಂಗಳ ಹಿಂದೆಯೇ ಉದ್ಘಾಟನೆ ಮಾಡಿದರು. ಆದರೆ ಆರೋಗ್ಯ ಕೇಂದ್ರ ಬೀಗ ತೆಗೆಯದೇ ಈವರೆಗೆ ಆರಂಭಗೊಂಡಿಲ್ಲ. ತಾಲ್ಲೂಕು ಹಾಗೂ ಸ್ಥಳೀಯ ಸಾರ್ವಜನಿಕರ ಹಿತದೃಷ್ಟಿಯಿಂದ ಸಿಎಚ್‌ಸಿ ಕೂಡಲೇ ಆರಂಭ ಮಾಡಬೇಕು. ಇಲ್ಲವಾದರೆ ದಿ: 18 ರಿಂದ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿ ಮನವಿ ಸಲ್ಲಿಸಿದರು.

ದಾವಲಸಾಬ್ ಹೆಬ್ಬಾಳ, ಚಿದಾನಂದ ಬಜಂತ್ರಿ, ದಾದಾ ಬೇಪಾರಿ, ಸಂಗನಗೌಡ ಬಿರಾದಾರ, ಮಲ್ಲಿಕಾರ್ಜುನ ಬಜಂತ್ರಿ, ಗುರುಪಾದಪ್ಪ ಮಣೂರ, ಕುಮಾರ ಚವ್ಹಾಣ, ಶಕೀಲ ಮರೋಳ, ಹಮೀದ್ ಮುಲ್ಲಾ, ಇಮಾಮ್ ಮುಲ್ಲಾ, ಸಂಜೀವ ರಾಠೋಡ, ಚಿದಾನಂದ ಉಪ್ಪಾರ, ರಿಯಾಜ್ ಜಾತಗಾರ, ದೇವು ಹಡಪದ, ಸಿದ್ಧನಗೌಡ ಬಿರಾದಾರ ಇದ್ದರು.

# ರೈತರ ಹಿತಕ್ಕಾಗಿ ಎರಡೂ ಪಕ್ಷಗಳು ವಿಧಾನಸಭೆಯಲ್ಲಿ ಒಗ್ಗಟ್ಟಿನಿಂದ ಹೋರಾಡಲು ನಿರ್ಧಾರ । ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿಕೆ

## ಬಿಡದಿ ಟೌನ್‌ಶಿಪ್: ಚರ್ಚೆ ಆರಂಭಕ್ಕೆ ಬಿಜೆಪಿ–ಜೆಡಿಎಸ್ ನಿರ್ಧಾರ



ಬೆಂಗಳೂರು: ರಾಜ್ಯ ವಿಧಾನಸಭೆ ಅಧಿವೇಶನಕ್ಕೂ ಮುನ್ನ ಬಿಡದಿ ಟೌನ್‌ಶಿಪ್ ಯೋಜನೆಗೆ ವಿರೋಧ ವ್ಯಕ್ತಪಡಿಸಿ ಕರ್ನಾಟಕದ ಬಿಜೆಪಿ ಮತ್ತು ಜೆಡಿಎಸ್ ನಾಯಕರು ಶನಿವಾರ ಸಭೆ ನಡೆಸಿದರು.

ಬಿಡದಿಯಲ್ಲಿ ಕಾಂಗ್ರೆಸ್ ಸರ್ಕಾರ ಪ್ರಸ್ತಾಪಿಸಿರುವ ಟೌನ್‌ಶಿಪ್ ಯೋಜನೆಗೆ ರೈತರಿಂದ ನಿರಂತರ ವಿರೋಧ ವ್ಯಕ್ತವಾಗುತ್ತಿರುವ ಹಿನ್ನೆಲೆಯಲ್ಲಿ ಈ ಸಭೆ ನಡೆದಿದೆ. ಕೃಷಿ ಭೂಮಿ ಸ್ವಾಧೀನದಿಂದ ತಮ್ಮ ಜೀವನೋಪಾಯದ ಮೇಲೆ ಪರಿಣಾಮ ಬೀರುವ ಬಗ್ಗೆ ರೈತರು ಆತಂಕ ವ್ಯಕ್ತಪಡಿಸುತ್ತಿದ್ದಾರೆ.

ಜುಲೈ ತಿಂಗಳಲ್ಲಿಯೇ ಬೆಂಗಳೂರಿನಲ್ಲಿ ಪ್ರಸ್ತಾಪಿತ ಬಿಡದಿ ಟೌನ್‌ಶಿಪ್ ಯೋಜನೆ ವಿರುದ್ಧ ಬಿಜೆಪಿ ನಾಯಕರು ಮತ್ತು ಕಾರ್ಯಕರ್ತರು ಬೃಹತ್ ಪ್ರತಿಭಟನೆ ನಡೆಸಿ, ಯೋಜನೆಯನ್ನು ಕೈಬಿಡುವಂತೆ ಒತ್ತಾಯಿಸಿದ್ದರು.

ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ, ಟೌನ್‌ಶಿಪ್ ಯೋಜನೆಗೆ ಶೇ.80ರಷ್ಟು ರೈತರು ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ತಮ್ಮ ಭೂಮಿಯನ್ನು ಬಿಟ್ಟುಕೊಡಲು ಸಿದ್ಧರಿಲ್ಲ ಎಂದು ಹೇಳಿದ್ದರು. ಬಿಡದಿ ಸಮೀಪ ಪ್ರಸ್ತಾಪಿಸಲಾಗಿರುವ ಗ್ರೇಟರ್ ಬೆಂಗಳೂರು ಇಂಟಿಗ್ರೇಟೆಡ್ ಟೌನ್‌ಶಿಪ್ (ಉಃಃಖಿ) ಯೋಜನೆಗಾಗಿ ಸುಮಾರು 500 ಎಕರೆ ಭೂಮಿ ಸ್ವಾಧೀನಪಡಿಸಿಕೊಳ್ಳಲು ಸರ್ಕಾರ ಅಂತಿಮ ಅಧಿಸೂಚನೆ ಹೊರಡಿಸಿದ ಬಳಿಕ ವಿಜಯೇಂದ್ರ ಈ ಹೇಳಿಕೆ ನೀಡಿದ್ದರು.

ರೈತರು ತಮ್ಮ ಭೂಮಿಯನ್ನು ಬಿಟ್ಟುಕೊಡುವಂತೆ ಒತ್ತಡ ಹೇರಬಾರದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಅವರು ಒತ್ತಾಯಿಸಿದ್ದರು. ರೈತರಿಗೆ ಭೂಮಿ ಬಿಟ್ಟುಕೊಡುವಂತೆ ಗೂಂಡಾಗಳ ಮೂಲಕ ಬೆದರಿಕೆ ಹಾಕಲಾಗುತ್ತಿದೆ ಎಂದೂ ಅವರು ಆರೋಪಿಸಿದ್ದರು.

ಈ ನಡುವೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಈ ಯೋಜನೆಗೆ ಸಂಬಂಧಿಸಿದ ಅಧಿಸೂಚನೆಯನ್ನು ಹೆಚ್.ಡಿ. ಕುಮಾರಸ್ವಾಮಿ ಹೊರಡಿಸಿದ್ದರು, ಬಳಿಕ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಅದನ್ನು ಮುಂದುವರಿಸಿದ್ದರು. ಬಿಡದಿಯ ರೈತರು ಒಳ್ಳೆಯ ಜನ. ಅವರನ್ನು ತಪ್ಪುದಾರಿಗೆ ಎಳೆಯಲಾಗುತ್ತಿದೆ. ಕುಮಾರಸ್ವಾಮಿ ಈ ಯೋಜನೆಯ ಪಿತಾಮಹರಲ್ಲವೇ ಅವರೇ ಅದನ್ನು ಒಪ್ಪಿಕೊಂಡಿದ್ದಾರೆ ಎಂದು ಮುಖ್ಯಮಂತ್ರಿ ಹೇಳಿದರು.ನಾವು ಯೋಜನೆಯನ್ನು ಮುಂದುವರಿಸುತ್ತಿದ್ದೇವಷ್ಟೇ. ಹೊಸದಾಗಿ ಏನನ್ನೂ ಮಾಡುತ್ತಿಲ್ಲ. ಬಿಡದಿ ಕೈಗಾರಿಕಾ ಪ್ರದೇಶಕ್ಕಾಗಿ ಭೂಮಿ ಸ್ವಾಧೀನಪಡಿಸಿಕೊಂಡವರು ಯಾರು? ಈಗಿರುವ 9,000 ಎಕರೆಯಲ್ಲಿ ಮಾಜಿ ಬಿಜೆಪಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ 1,000 ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಂಡಿರಲಿಲ್ಲವೇ ಎಂದು ಪ್ರಶ್ನಿಸಿದರು.

### ಭಾರತದ ಮೊದಲ ‘ಕೃತಕ ಬುದ್ಧಿಮತ್ತೆ (AI) ಚಾಲಿತ ನಗರ’




ಬೆಂಗಳೂರಿನಿಂದ ಸುಮಾರು 40 ಕಿ.ಮೀ. ದೂರದಲ್ಲಿರುವ ಬಿಡದಿಯಲ್ಲಿ ಭಾರತದ ಮೊದಲ ‘ಕೃತಕ ಬುದ್ಧಿಮತ್ತೆ (ಂಖ) ಚಾಲಿತ ನಗರ’ ನಿರ್ಮಿಸುವ ಉದ್ದೇಶವನ್ನು ಈ ಯೋಜನೆ ಹೊಂದಿದೆ. ಸುಮಾರು 9,600 ಎಕರೆ ಪ್ರದೇಶವನ್ನು ಒಳಗೊಂಡಿರುವ ಯೋಜನೆಗೆ ಫಲವತ್ತಾದ ಕೃಷಿ ಭೂಮಿಯ ದೊಡ್ಡ ಪ್ರಮಾಣದ ಸ್ವಾಧೀನ ಅಗತ್ಯವಿದೆ.

### ರಾಜಕೀಯ ಸಂಘರ್ಷಕ್ಕೆ ಕಾರಣವಾದ ಯೋಜನೆ

ಕರ್ನಾಟಕ ಸರ್ಕಾರ ಪ್ರಸ್ತಾಪಿಸಿರುವ ಗ್ರೇಟ–ರ್‌ಬೆಂಗಳೂರು ಇಂಟಗ್ರೇಟೆಡ್ ಟೌನ್‌ಶಿಪ್ (ಉಃಖಖಿ) ಯೋಜನೆಯು ರೈತರ ತೀವ್ರ ವಿರೋಧಕ್ಕೆ ಕಾರಣವಾಗಿದ್ದು, ಭೂಸ್ವಾಧೀನ ವಿಚಾರವಾಗಿ ರಾಜ–ಕೀಯ ಸಂಘರ್ಷಕ್ಕೂ ಕಾರಣವಾಗಿದೆ.

# ವಾಹನ ಗ್ಯಾರೇಜ್‌ನಲ್ಲಿ ಧೂಳು ಹಿಡಿಯುತ್ತಿದ್ದರೂ ನಿರ್ಲಕ್ಷ್ಯ । ಅಧಿಕಾರಿಗಳ ಬೇಜವಾಬ್ದಾರಿಗೆ ಸಾರ್ವಜನಿಕರ ಆಕ್ರೋಶ

## ಮೋರಟಗಿ ಗ್ರಾಪಂ ಕಸದ ವಾಹನಕ್ಕೆ ಹಿಡಿದ ಗ್ರಹಣ!

■ ಉದಯರಶ್ಮಿ ದಿನಪತ್ರಿಕೆ

ಮೋರಟಗಿ: ಗ್ರಾಮದಲ್ಲಿ ನೈರ್ಮಲ್ಯ ಹಾಗೂ ಸ್ವಚ್ಛತೆಯನ್ನು ಕಾಪಾಡುವ ಉದ್ದೇಶದಿಂದ ನೀಡಲಾದ ಗ್ರಾಮ ಪಂಚಾಯಿತಿಯ ಘನತ್ಯಾಜ್ಯ ನಿರ್ವಹಣೆ (ಕಸದ) ವಾಹನವು ಕಳೆದ ಮೂರು ತಿಂಗಳಿನಿಂದ ಗ್ಯಾರೇಜ್‌ನಲ್ಲಿ ಮೂಲೆ ಸೇರಿದ್ದರೂ ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯ ವಹಿಸಿದ್ದಾರೆ ಎಂಬ ಆರೋಪ ಕೇಳಿಬಂದಿದೆ.

ಗ್ರಹಣ ಹಿಡಿದಂತಾಗಿರುವ

ವಾಹನದ ಬಾಡಿಯು ಸಂಪೂರ್ಣವಾಗಿ ಹಾನಿಗೊಂಡಿದ್ದು, ದುರಸ್ತಿಗಾಗಿ ಖಾಸಗಿ ಗ್ಯಾರೇಜ್‌ಗೆ ನೀಡಲಾಗಿತ್ತು. ಆದರೆ, ಹಣ ಪಾವತಿಸದ ಕಾರಣ ಗ್ಯಾರೇಜ್ ಮಾಲೀಕರು ರಿಪೇರಿ ಕೆಲಸವನ್ನು ಅರ್ಧಕ್ಕೆ ನಿಲ್ಲಿಸಿದ್ದು, ಕಳೆದ ಹಲವು ತಿಂಗಳುಗಳಿಂದ ವಾಹನವು ಅನಾಥವಾಗಿ ನಿಂತಿದೆ. ಇದರಿಂದಾಗಿ ಸರ್ಕಾರಿ ಆಸ್ತಿ ಹಾಳಾಗುತ್ತಿದ್ದು, ಲಕ್ಷಾಂತರ ರೂಪಾಯಿ ಮೌಲ್ಯದ ವಾಹನವು ಜಂಗ್ ಹಿಡಿಯುವ ಸ್ಥಿತಿಗೆ ತಲುಪಿದೆ.

ಈ ಕುರಿತು ಪತ್ರಿಕೆಯು ಅಧಿಕಾರಿಗಳನ್ನು ಪ್ರಶ್ನಿಸಿದಾಗ, ತಮ್ಮ ಜವಾಬ್ದಾರಿಯಿಂದ ನುಣುಚಿಕೊಳ್ಳುವ ಯತ್ನ ನಡೆಸಿದ್ದಾರೆ:

ಗ್ರಾಮದಲ್ಲಿ ಕಸ ವಿಲೇವಾರಿ ಸರಿಯಾಗಿ ನಡೆಯದೆ ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದರೆ, ಇತ್ತ ಲಕ್ಷಾಂತರ ರೂಪಾಯಿ ವೆಚ್ಚದ ಸರ್ಕಾರಿ ವಾಹನ ಗ್ಯಾರೇಜ್‌ನಲ್ಲಿ ಧೂಳು ಹಿಡಿಯುತ್ತಿದೆ. ಮೇಲಧಿಕಾರಿಗಳು ತಕ್ಷಣವೇ ಮಧ್ಯಪ್ರವೇಶಿಸಿ, ವಾಹನವನ್ನು ದುರಸ್ತಿ ಮಾಡಿಸಿ ಗ್ರಾಮದ ನೈರ್ಮಲ್ಯ ಕಾರ್ಯಕ್ಕೆ ಬಳಸಿಕೊಳ್ಳಬೇಕೆಂದು ಮೋರಟಗಿ ಗ್ರಾಮಸ್ಥರು ಆಗ್ರಹಿಸಿದ್ದಾರೆ.



### ಪೂರ್ಣ ಮಾಹಿತಿ ಇಲ್ಲ :ಪಿಡಿಒ

ಇನ್ನು ಪ್ರಸ್ತುತ ಕರ್ತವ್ಯದಲ್ಲಿರುವ ನೂತನ ಪಿಡಿಒ ಅವರನ್ನು ಸಂಪರ್ಕಿಸಿದಾಗ, "ನಾನು ಈ ಪಂಚಾಯಿತಿಗೆ ಬಂದು ಕೇವಲ ಒಂದು ವಾರವಾಗಿದೆ. ವಾಹನದ ರಿಪೇರಿ ಹಾಗೂ ಅದರ ಸಮಸ್ಯೆಗಳ ಕುರಿತು ಪೂರ್ಣ ಮಾಹಿತಿ ಇಲ್ಲ. ಈ ಕುರಿತು ಸಿಬ್ಬಂದಿಯಿಂದ ಮಾಹಿತಿ ಪಡೆದು, ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುತ್ತೇನೆ" ಎಂದು ಹಾರಿಕೆ ಉತ್ತರ ನೀಡಿದ್ದಾರೆ.

### ಮಾಜಿ ಕಾರ್ಯದರ್ಶಿ ನೀಡಿದ ಸ್ಪಷ್ಟನೆ

ಈ ಬಗ್ಗೆ ಪಂಚಾಯಿತಿಯ ಮಾಜಿ ಮಹಿಳಾ ಕಾರ್ಯದರ್ಶಿಯವರನ್ನು ವಿಚಾರಿಸಿದಾಗ, "ವಾಹನದ ಬಾಡಿ ಹಾಳಾಗಿದ್ದರಿಂದ ಅದನ್ನು ದುರಸ್ತಿಗೆ ನೀಡಲಾಗಿ–ತ್ತು. ಅಡ್ವಾನ್ಸ್ ಹಣ ಕೊಟ್ಟು ರಿಪೇರಿಗೆ ನೀಡಿದ್ದೆವು. ಆದರೆ ವಾಟರ್‌ಮ್ಯಾನ್ ತಂದು ಗ್ಯಾರೇಜ್ ಮುಂದೆ ನಿಲ್ಲಿಸಿದ್ದಾನೆ. ಪ್ರಸ್ತುತ ನಾನು ಬೇರೆ ಪಂಚಾಯಿತಿಗೆ ವರ್ಗಾವಣೆಯಾಗಿದ್ದು, ಪ್ರಭಾರವನ್ನು ನೂತನ ಪಿಡಿಒ ಅವರಿಗೆ ಹಸ್ತಾಂತರಿಸಿದ್ದೇನೆ" ಎಂದು ತಿಳಿಸಿದರು.

# ಮುದ್ದೇಬಿಹಾಳ & ತಾಳಿಕೋಟೆ ತಾಲೂಕುಗಳನ್ನು ಬರಪೀಡಿತವೆಂದು ಘೋಷಣೆಗೆ ಆಗ್ರಹ

## ತಾಳಿಕೋಟೆಯಲ್ಲಿ ಆ.10ರಂದು ಬೃಹತ್ ಪ್ರತಿಭಟನೆ

■ ಉದಯರಶ್ಮಿ ದಿನಪತ್ರಿಕೆ

ತಾಳಿಕೋಟೆ: ಮುದ್ದೇಬಿಹಾಳ ಹಾಗೂ ತಾಳಿಕೋಟೆ ತಾಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಿಸಿ, ಸಂಕಷ್ಟದಲ್ಲಿರುವ ರೈತರಿಗೆ ಸರ್ಕಾರದಿಂದ ಸೂಕ್ತ ಪರಿಹಾರ ಹಾಗೂ ಅಗತ್ಯ ನೆರವು ಒದಗಿಸುವಂತೆ ಆಗ್ರಹಿಸಿ ಸೋಮವಾರ, ಆಗಸ್ಟ್ 10, 2026ರಂದು ತಾಳಿಕೋಟೆಯಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಇಂದು ತಾಳಿಕೋಟೆ ನಗರದ ಅತಿಥಿಗೃಹದಲ್ಲಿ ಮಾಜಿ ಶಾಸಕರು ಹಾಗೂ ಭಾರತೀಯ ಜನತಾ ಪಕ್ಷದ ರೈತ ಮೋರ್ಚಾ ರಾಜ್ಯಾಧ್ಯಕ್ಷರಾದ ಎ.ಎಸ್. ಪಾಟೀಲ ನಡಹಳ್ಳಿ ಹಾಗೂ ಮಾಜಿ ಶಾಸಕರು ಸೋಮನಗೌಡ ಪಾಟೀಲ್ ಸಾಸನೂರ್ ಅವರ ನೇತೃತ್ವದಲ್ಲಿ ಪೂರ್ವಭಾವಿ ಸಭೆ ನಡೆಯಿತು.

ಸಭೆಯಲ್ಲಿ ಮಾತನಾಡಿದ ಅವರು, ಉತ್ತರ ಕರ್ನಾಟಕದ ಅತ್ಯಂತ ಬರಪೀಡಿತ ಪ್ರದೇಶಗಳಲ್ಲಿ ತಾಳಿಕೋಟೆ, ಮುದ್ದೇಬಿಹಾಳ ಹಾಗೂ ದೇವರಹಿಪ್ಪರಗಿ ಭಾಗಗಳು ಪ್ರಮುಖವಾಗಿವೆ ಎಂದು ಹೇಳಿದರು. ವಿಜಯಪುರ ಜಿಲ್ಲೆಯ ಈ ಭಾಗಗಳು ಉತ್ತರ ಕರ್ನಾಟಕದ ಒಣಹವಾಮಾನ ಪ್ರದೇಶದ ಭಾಗವಾಗಿದ್ದು, ಕೃಷಿ ಮಳೆಯ ಮೇಲೆ ಹೆಚ್ಚಿನ ಪ್ರಮಾಣದಲ್ಲಿ ಅವಲಂಬಿತವಾಗಿದೆ. ಕರ್ನಾಟಕ ಸರ್ಕಾರದ ದಾಖಲೆಗಳಲ್ಲಿಯೂ ಮುದ್ದೇಬಿಹಾಳ ಸೇರಿದಂತೆ ವಿಜಯಪುರ ಜಿಲ್ಲೆಯ ಹಲವು ತಾಲೂಕುಗಳು ಉತ್ತರ ಕರ್ನಾಟಕದ ಒಣ ವಲಯಕ್ಕೆ ಸೇರಿವೆ. ರೈತರ ಸಂಕಷ್ಟಕ್ಕೆ ಸರ್ಕಾರ ಸ್ಪಂದಿಸಬೇಕು

ಮಳೆ ಕೊರತೆ ಹಾಗೂ ಮಳೆಯಲ್ಲಿನ ಅನಿಶ್ಚಿತತೆಯಿಂದಾಗಿ ರೈತರು ಬೆಳೆ ಬೆಳೆಯಲು ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ಸಮಯಕ್ಕೆ ಸರಿಯಾಗಿ ಮಳೆಯಾಗದಿರುವುದು, ಬಿತ್ತನೆ ಮಾಡಿದ ನಂತರ ಮಳೆ ಕೈಕೊಡುವುದು ಹಾಗೂ ಮಳೆಯ ಹಂಚಿಕೆಯಲ್ಲಿ ವ್ಯತ್ಯಾಸ ಉಂಟಾಗುವುದರಿಂದ ಬಿತ್ತನೆ ಮಾಡಿದ ಬೆಳೆಗಳ ಬೆಳವಣಿಗೆ ಕುಂಠಿತವಾಗುವ ಮತ್ತು ಇಳುವರಿ ಕುಸಿಯುವ ಆತಂಕ ರೈತರಲ್ಲಿ ಮೂಡಿದೆ.

ಇದರ ಪರಿಣಾಮವಾಗಿ ರೈತರ ಆದ–ಾಯದ ಮೇಲೆ ನೇರ ಪರಿಣಾಮ ಬೀರುವುದರ ಜೊತೆಗೆ, ಬೀಜ, ಗೊಬ್ಬರ, ಕೀಟನಾಶಕ, ಕೃಷಿ ಯಂತ್ರೋಪಕರಣ ಹಾಗೂ ಕೂಲಿ ವೆಚ್ಚಗಳಿಗೆ ಮಾಡಿರುವ ಹೂಡಿಕೆಯೂ ವಾಪಸ್ ಬರುವುದಿಲ್ಲ ಎಂಬ ಆತಂಕ ಎದುರಾಗಿದೆ.

ಬರ ಪರಿಸ್ಥಿತಿ ಕೇವಲ ಕೃಷಿಗೆ ಮಾತ್ರ ಸೀಮಿತವಾಗದೆ ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಮತ್ತು ನೀರು, ಗ್ರಾಮೀಣ ಉದ್ಯೋಗ ಹಾಗೂ ಗ್ರಾಮೀಣ ಆರ್ಥಿಕ ಚಟುವಟಿಕೆಗಳ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ. ಕರ್ನಾಟಕದಲ್ಲಿ ಬರ ಪರಿಸ್ಥಿತಿಯನ್ನು ವೈಜ್ಞಾನಿಕ ಮಾನದಂಡಗಳ ಆಧಾರದ ಮೇಲೆ ಏಖಓಆಒಅ ಗುರುತಿಸುವ ವ್ಯವಸ್ಥೆ ಇದೆ. ಈ ಹಿನ್ನೆಲೆಯಲ್ಲಿ ಸರ್ಕಾರ ಕೂಡಲೇ: ತಾಳಿಕೋಟೆ ಹಾಗೂ ಮುದ್ದೇಬಿಹಾಳ ತಾಲೂಕುಗಳನ್ನುಬರಪೀಡಿತತಾಲೂಕುಗಳೆಂದು ಘೋಷಿಸಬೇಕು ಎಂದು ಆಗ್ರಹಿಸಿದರು.

ಆ.10ರಂದು ಬೃಹತ್ ಪ್ರತಿಭಟನೆ

ರೈತರ ಈ ನ್ಯಾಯಯುತ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತರಲು ಆಗಸ್ಟ್ 10ರಂದು ತಾಳಿಕೋಟೆಯಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ರೈತರು, ಕೃಷಿಕರು, ವಿವಿಧ ಸಂಘಟನೆಗಳ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪ್ರತಿಭಟನೆಯನ್ನು ಯಶಸ್ವಿಗೊಳಿಸುವಂತೆ ಸಭೆಯಲ್ಲಿ ಕರೆ ನೀಡಲಾಯಿತು.



“ರೈತರ ಬದುಕು ಉಳಿಯಬೇಕು ಬರಪೀಡಿತತಾಲೂಕುಗಳಘೋಷಣೆಆಗಬೇಕು” ಎಂಬ ಹಕ್ಕೊತ್ತಾಯದೊಂದಿಗೆ ಹೋರಾಟವನ್ನು ಸಂಘಟಿಸಲು ಸಭೆಯಲ್ಲಿ ನಿರ್ಧರಿಸಲಾಯಿತು.

ಬೇಡಿಕೆಗಳು ದೇವರಹಿಪ್ಪರಗಿ ಕ್ಷೇತ್ರದ ಬರ ಪರಿಸ್ಥಿತಿಯನ್ನೂ ಸಮಗ್ರವಾಗಿ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು.

ಬರದಿಂದ ಹಾನಿಗೊಳಗಾದ ಬೆಳೆಗಳ ವೈಜ್ಞಾನಿಕ ಸಮೀಕ್ಷೆ ನಡೆಸಿ ರೈತರಿಗೆ ಬೆಳೆ ಪರಿಹಾರ ನೀಡಬೇಕು.

ರೈತರಿಗೆ ಲಭ್ಯವಿರುವ ಸರ್ಕಾರದ ಬರ ಪರಿಹಾರ ಹಾಗೂ ಇತರ ನೆರವುಗಳನ್ನು ತ್ವ–ರಿತವಾಗಿ ಒದಗಿಸಬೇಕು.

ಜಾನುವಾರುಗಳಿಗೆ ಮೇವು ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು.

ಕುಡಿಯುವ ನೀರಿನ ಸಮಸ್ಯೆ ಎದುರಾಗುವ ಗ್ರಾಮಗಳಿಗೆ ಮುನ್ನೆಚ್ಚರಿಕೆಯಾಗಿ ಟ್ಯಾಂಕರ್ ಹಾಗೂ ಪರ್ಯಾಯ ನೀರಿನ ವ್ಯವಸ್ಥೆ ಕಲ್ಪಿಸಬೇಕು.

ರೈತರ ಸಾಲದ ಒತ್ತಡವನ್ನು ಪರಿಗಣಿಸಿ ಅಗತ್ಯ ರಿಯಾಯಿತಿ ಮತ್ತು ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು.

ನರೇಗಾ ಸೇರಿದಂತೆ ಗ್ರಾಮೀಣ ಉದ್ಯೋಗಾವಕಾಶಗಳನ್ನು ಹೆಚ್ಚಿಸಿ, ಬರದಿಂದ ಸಂಕಷ್ಟಕ್ಕೊಳಗಾದ ಕುಟುಂಬಗಳಿಗೆ ಉದ್ಯೋಗದ ಭದ್ರತೆ ಒದಗಿಸಬೇಕು.



ಕಲಬುರಗಿ: ಬಹುಜನ ಸಮಾಜ ಪಕ್ಷದ ರಾಯಚೂರು ಜಿಲ್ಲೆ ಉಸ್ತುವಾರಿ ಭೂಮಾನಂದ ಹದ್ದಿನಾಳ ಅವರ ಹತ್ಯೆಯನ್ನು ಖಂಡಿಸಿ,ಆರೋಪಿಗಳ ಶೀಘ್ರ ಬಂಧನ,ಮೃತರ ಕುಟುಂಬಕ್ಕೆ ಸೂಕ್ತ ಭದ್ರತೆ, ಪರಿಹಾರಕ್ಕೆ ಆಗ್ರಹಿಸಿ ಇಂದು ಬಹುಜನ ಸಮಾಜ ಪಕ್ಷ ಜಿಲ್ಲಾಘಟಕದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿ ಜಿಲ್ಲಾಡಳಿತದ ಮೂಲಕ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು. ಜಿಲ್ಲಾಧ್ಯಕ್ಷ ಶಿವಯೋಗಿ ಹಡಗಿಕರ್, ಎಲ್.ಆರ್ ಭೋಸಲೆ,ಡಾ.ಅನೀಲ ಟೆಂಗಳಿ,ತಿಪ್ಪಣ್ಣ ಕಿನ್ನೂರು, ಉಚ್ಛೇಶ್ವರ ವಠಾರ,ಮೈಲಾರಿ ಶೆಳ್ಳಗಿ ಅವರು ಸೇರಿದಂತೆ ಹಲವರು ಪಾಲ್ಗೊಂಡರು.




ಕಲಬುರಗಿ: ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಯಲ್ಲಿ ಇಂದು ಸಂಘಟನಾ ಸೃಜನ್ ಅಭಿಯಾನದ ಕಲಬುರಗಿ ಜಿಲ್ಲೆಯ ಎಐಸಿಸಿ ಉಸ್ತುವಾರಿ, ಮಹಾರಾಷ್ಟ್ರದ ಮಾಜಿ ಸಚಿವ ಹಾಗೂ ಶಾಸಕ ಡಾ. ವಿಶ್ವಜಿತ್ ಕದಮ್ ಅವರು ಅಭಿಯಾನದ ಕುರಿತು ಸಭೆ ನಡೆಸಿದರು.ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ಜಗದೇವ ಗುತ್ತೇದಾರ ಅವರು ಸೇರಿದಂತೆ ಮುಖಂಡರು ಉಪಸ್ಥಿತರಿದ್ದರು .

# ರಾಷ್ಟ್ರೀಯ ಗ್ರಾಮೀಣ ಬ್ಯಾಂಕ್‌ನಿಂದ ಮಾತ್ರ ಗ್ರಾಮೀಣ ಬ್ಯಾಂಕುಗಳು ಸದೃಢವಾಗಲು ಸಾಧ್ಯ : ಶಿವಕುಮಾರ ಬಗಲೂರ

ಕಲಬುರಗಿ:ರಾಷ್ಟ್ರೀಯ ಗ್ರಾಮೀಣ ಬ್ಯಾಂಕ್‌ನಿಂದ ಮಾತ್ರ ಗ್ರಾಮೀಣ ಬ್ಯಾಂಕುಗಳು ಸದೃಢವಾಗಲು ಸಾಧ್ಯ ಎಂದು ಅಖಿಲ ಭಾರತ ಪ್ರಾದೇಶಿಕ ಗ್ರಾಮೀಣ ಬ್ಯಾಂಕ ನೌಕರರ ಸಂಘ ಉಪಾಧ್ಯಕ್ಷ ಶಿವಕುಮಾರ ಬಗಲೂರ ಅವರು ತಿಳಿಸಿದ್ದಾರೆ.ದೇಶದಲ್ಲಿ ಇರುವ 28 ಗ್ರಾಮೀಣ ಬ್ಯಾಂಕುಗಳು 2025-2026ರ ಸಾಲಿನಲ್ಲಿ ದಾಖಲೆಯ 10,177 ಕೋಟಿ ರೂ ನಿವ್ವಳ ಲಾಭ ಗಳಿಸಿವೆ. ಗ್ರಾಮೀಣ ಬ್ಯಾಂಕುಗಳ ಒಟ್ಟು ಠೇವಣಿ 7.68 ಲಕ್ಷ ಕೋಟಿ,

ಮುಂಗಡ ಸಾಲ 5.78 ಲಕ್ಷ ಕೋಟಿ, ಅನುತ್ಪಾದಕ ಸಾಲ 5.3% ಅಆ ಅನುಪಾತ 75.2% ಮತ್ತು ಅಖಂಖ 15% ಇದ್ದು ಸಾರ್ವಜನಿಕ ವಲಯದ ಬ್ಯಾಂಕುಗಳಿಗೆ ಸರಿಸಾಟಿಯಾಗಿ ಕಾರ್ಯ ನಿರ್ವಹಿಸುತ್ತಿವೆ ಎಂದು ಹರ್ಷ ವ್ಯಕ್ತಪಡಿಸಿದರು. 2 ನೇಯ ಅಕ್ಟೋಬರ್ 1975 ರಂದು ಸ್ಥಾಪನೆಯಾದ ಗ್ರಾಮೀಣ ಬ್ಯಾಂಕುಗಳ ಉದ್ದೇಶ ಕೃಷಿ ಸಾಲ, ಹೈನುಗಾರಿಕೆ, ಸಣ್ಣ ವ್ಯಾಪಾರ ಸಾಲ ನೀಡುವುದರ ಮೂಲಕ ಗ್ರಾಮೀಣ ಜನರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ನೆರವಾಗಿದ್ದವು. ಇಂದು ಗ್ರಾಮೀಣ ಬ್ಯಾಂಕುಗಳು ಹೆಮ್ಮರವಾಗಿ ಬೆಳೆದಿದ್ದು ಕೇವಲ ಸಾಮಾಜಿಕ ಯೋಜನೆಗಳಿಗೆ ಸೀಮಿತವಾಗಿರದೆ ಲಾಭದಾಯಕವಾಗಿ ಹೊರಹೊಮ್ಮುತ್ತಿದ್ದು, ಗ್ರಾಮೀಣ ಬ್ಯಾಂಕುಗಳಲ್ಲಿ ಸರಿಸುಮಾರು 1.25 ಲಕ್ಷ ನೌಕರರು ಮತ್ತು ಅಧಿಕಾರಿಗಳು ಕಾರ್ಯ ನಿರ್ವಹಿಸುತ್ತಿದ್ದು ಗ್ರಾಮೀಣ ಭಾಗದ ಜನರಿಗೆ ಕೃಷಿ ಸಾಲ, ಸ್ವಸಹಾಯ ಸಂಘಗಳಿಗೆ ಸಾಲ, ಒಖಒಇ, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಜನಪರ ಯೋಜನೆಗಳನ್ನು ಜಾರಿಗೆ ತರುವುದರ ಜೊತೆಗೆ ಗ್ರಾಮೀಣಾಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ಈ ಗಮನಾರ್ಹ ಸಾಧನೆಯನ್ನು ಪರಿಗಣಿಸಿ ಹಲವು ವರ್ಷಗಳ ಬೇಡಿಕೆಯಾದ 28 ಗ್ರಾಮೀಣ ಬ್ಯಾಂಕುಗಳನ್ನು ಒಗ್ಗೂಡಿಸಿ ರಾಷ್ಟ್ರೀಯ ಗ್ರಾಮೀಣ ಬ್ಯಾಂಕ ಸ್ಥಾಪಿಸಿದ್ದಲ್ಲಿ ಗ್ರಾಮೀಣ ಬ್ಯಾಂಕುಗಳು ಬಲಿಷ್ಠವಾಗಿ ಹಾಗೂ ಸ್ವಾತಂತ್ರ್ಯವಾಗಿ ಇನ್ನೂ ಉತ್ತಮವಾಗಿ ವಿಕಸಿತ ಭಾರತದ ಆಶಯಕ್ಕೆ ಪೂರಕವಾಗಿ ಕಾರ್ಯ ನಿರ್ವಹಿಸಲಿದೆ ಎಂದು ಹೇಳಿದರು.

# ವಿಕಸಿತ ಭಾರತ ಸಾಕಾರಕ್ಕೆ ದೇವಾಲಯಗಳು ಆಧಾರ: ಆರ್. ಆರ್. ಬಿರಾದಾರ್



ಕಲಬುರಗಿ: ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ (ಸಿಯುಕೆ)ದ ಪ್ರವಾಸೋದ್ಯಮ ಮತ್ತು ಹೋಟೆಲ್ ನಿರ್ವಹಣಾ ವಿಭಾಗ ಹಾಗೂ ಅರ್ಥಶಾಸ್ತ್ರ ಅಧ್ಯಯನ ಮತ್ತು ಯೋಜನಾ ವಿಭಾಗ ಹಾಗೂ ನವದೆಹಲಿಯ ಭಾರತೀಯ ಸಾಮಾಜಿಕ ವಿಜ್ಞಾನ ಸಂಶೋಧನಾ ಮಂಡಳಿ (ಐಸಿಎಎಸ್‌ಆರ್) ಸಹಯೋಗದಲ್ಲಿ ಆಯೋಜಿಸಿದ್ದ "ದೇವಾಲಯ ಆರ್ಥಿಕತೆ, ಪ್ರವಾಸೋದ್ಯಮ ಮತ್ತು ಸಾರ್ವಜನಿಕ ನೀತಿ: ಆಡಳಿತ, ಜೀವನೋಪಾಯ ಮತ್ತು ಸುಸ್ಥಿರ ಪ್ರಾದೇಶಿಕ ಅಭಿವೃದ್ಧಿ" ವಿಷಯದ ಮೂರು ದಿನಗಳ ಅಂತರರಾಷ್ಟ್ರೀಯ ಸಮ್ಮೇಳನವು ಯಶಸ್ವಿಯಾಗಿ ಸಮಾರೋಪಗೊಂಡಿತು.

ಸಮಾರೋಪ ಭಾಷಣ ಮಾಡಿದ ಸಿಯುಕೆ ಕುಲಸಚಿವ ಪ್ರೊ. ಆರ್. ಆರ್. ಬಿರಾದಾರ್ ಅವರು ಭಾರತೀಯ ದೇವಾಲಯಗಳು ಕೇವಲ ಆಧ್ಯಾತ್ಮಿಕ, ಭಕ್ತಿ ಕೇಂದ್ರಗಳಷ್ಟೇ ಅಲ್ಲದೆ ದೇಶದ ಆರ್ಥಿಕವಾಗಿ, ಸಾಮಾಜಿಕವಾಗಿ ಬಲ ನೀಡುವುದರ ಜೊತೆಗೆ ಶಿಕ್ಷಣ, ಆರೋಗ್ಯ ಸೇವೆ, ಅನ್ನದಾಸೋಹದ ಮೂಲಕ ಆಹಾರ ಭದ್ರತೆ, ದೇಶದ ಸಂಸ್ಕೃತಿ ಸಂರಕ್ಷಣೆ ಹಾಗೂ ಭಕ್ತಿಯ ಪರಂಪರೆ ಸೇರಿದಂತೆ ಸಮಾಜದ ಅಭಿವೃದ್ಧಿಯ ಮುಖಾಂತರ ವಿಕಸಿತ ಭಾರತ-2047 ರ ರಾಷ್ಟ್ರೀಯ ಕನಸನ್ನು ಸಾಕಾರಗೊಳಿಸುವಲ್ಲಿ ಪ್ರಮುಖ ಆಧಾರವಾಗಲಿದೆ ಎಂದು ಹೇಳಿದರು.

ಸಮ್ಮೇಳನ ಸಂಚಾಲಕ ಡಾ. ಗೋವಿನೋಲ್ಲಾ ಮಹೇಂದರ್ ಮಾತನಾಡಿ ಒಟ್ಟು 112 ಸಂಶೋಧನಾ ಪ್ರಬಂಧಗಳು ಮಂಡನೆಯಾದವು. ಅಧ್ಯಯನದ ಭಾಗವಾಗಿ ನಾಳೆ ಗಾಣಗಾಪುರದ ಶ್ರೀ ದತ್ತಾತ್ರೇಯ ದೇವಸ್ಥಾನಕ್ಕೆ ಭೇಟಿ ನೀಡಲಿದೆ ಎಂದು ಹೇಳಿದರು.

ವ್ಯವಹಾರ ಅಧ್ಯಯನ ನಿಕಾಯದ ಡೀನ್ ಪ್ರೊ. ಪಾಂಡುರಂಗ ಮಾತನಾಡಿ ವಿದ್ಯಾರ್ಥಿಗಳು ಮತ್ತು ಸಂಶೋಧಕರು ದೇವಾಲಯ, ಸಂಘ-ಸಂಸ್ಥೆಗಳು ಎದುರಿಸುತ್ತಿರುವ ಸಮಸ್ಯೆ ಹಾಗೂ ಸವಾಲುಗಳನ್ನು ಅಧ್ಯಯನ ಮಾಡಿ, ಸ್ಟಾಅಪ್ ಆಧಾರಿತ ಪರಿಹಾರಗಳನ್ನು ರೂಪಿಸುವ ಮೂಲಕ ದೇವಾಲಯಗಳ ಅಭಿವೃದ್ಧಿ, ಸ್ಥಳೀಯ ಮತ್ತು ಪ್ರಾದೇಶಿಕ ಸಮುದಾಯಗಳ ಅಭಿವೃದ್ಧಿಗೆ ಕೊಡುಗೆ ನೀಡಬೇಕೆಂದು ಹೇಳಿದರು.

ತಮಿಳುನಾಡು ಕೇಂದ್ರೀಯ ವಿ.ವಿ. ಸಹಾಯಕ ಪ್ರಾಧ್ಯಾಪಕಿ ಡಾ. ಕವಿತಾ ಕೆ., ಸಮ್ಮೇಳನದ ಸಹ-ಸಂಚಾಲಕ ಡಾ. ಎಸ್. ಲಿಂಗಮೂರ್ತಿ ಉಪಸ್ಥಿತರಿದ್ದರು. ಡಾ. ಸುಮಾ ಸ್ಕಾರಿಯಾ ಅವರು ವಂದನಾರ್ಪಣೆ ಸಲ್ಲಿಸಿದರು. ಕಾರ್ಯಕ್ರಮವು ರಾಷ್ಟ್ರಗೀತೆಯೊಂದಿಗೆ ಮುಕ್ತಾಯವಾಯಿತು.

ಸಮ್ಮೇಳನದಲ್ಲಿ ದೇವಾಲಯಗಳ ಆರ್ಥಿಕತೆ, ಸಾಮಾಜಿಕ ಅಭಿವೃದ್ಧಿ, ಸುಸ್ಥಿರ ಪ್ರಾದೇಶಿಕ ಅಭಿವೃದ್ಧಿ, ತೀರ್ಥಯಾತ್ರೆ ಪ್ರವಾಸೋದ್ಯಮ, ಜೀವನೋಪಾಯ ಬೆಂಬಲ, ಉದ್ಯೋಗ ಸೃಷ್ಟಿ, ದೇವಾಲಯ ನಿರ್ವಹಣೆ, ಆಡಳಿತ ಹಾಗೂ ಸಂಬಂಧಿತ ಸಾರ್ವಜನಿಕ ನೀತಿ ವಿಷಯಗಳ ಕುರಿತು ವ್ಯಾಪಕ ಚರ್ಚೆ, ಸಂವಾದಗಳು ನಡೆದವು.

ಸಂಶೋಧನಾ ವಿದ್ಯಾರ್ಥಿಗಳು, ಶಿಕ್ಷಣ ತಜ್ಞರು, ತಜ್ಞರು, ನೀತಿ ತಜ್ಞರು ಹಾಗೂ ದೇವಾಲಯ ನಿರ್ವಹಣಾ ಸಮಿತಿಗಳ ಪ್ರತಿನಿಧಿಗಳು ಸಕ್ರಿಯವಾಗಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ವಿ.ವಿ.ಯ ಪ್ರವಾಸೋದ್ಯಮ ಮತ್ತು ಹೋಟೆಲ್ ನಿರ್ವಹಣಾ ವಿಭಾಗ, ವಾಣಿಜ್ಯ ವಿಭಾಗ ಸೇರಿದಂತೆ ಇತರ ವಿವಿಧ ವಿಭಾಗಗಳ ಅಧ್ಯಾಪಕರು, ಡೀಗಳು, ಸಂಶೋಧನಾ ವಿದ್ಯಾರ್ಥಿಗಳು ಮತ್ತು ದೇಶದ ವಿವಿಧ ಭಾಗಗಳಿಂದ ಆಗಮಿಸಿದ ಪ್ರತಿನಿಧಿಗಳು ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿದ್ದರು.

# ವಿದ್ಯಾರ್ಥಿಗಳು ವಿಜ್ಞಾನತಂತ್ರಜ್ಞಾನ ಕ್ಷೇತ್ರದಲ್ಲಿ ಸಂಶೋಧನೆ ಕೈಗೊಳ್ಳಿ

ಕಲಬುರಗಿ: ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ (ಸಿಯುಕೆ) ವಿದ್ಯಾರ್ಥಿ ಕಲ್ಯಾಣ ವಿಭಾಗದ (ಡಿ.ಎಸ್.ಡಬ್ಲ್ಯೂ) ವತಿಯಿಂದ ವಿ.ವಿ.ಯ 12 ನಿಕಾಯ, 29 ವಿಭಾಗಗಳಿಂದ ಹೊಸದಾಗಿ ಸ್ನಾತಕೋತ್ತರ ಪದವಿ ಪ್ರವೇಶ ಪಡೆದಿದ್ದ ವಿದ್ಯಾರ್ಥಿಗಳಿಗಾಗಿ ಕಳೆದ ಎರಡು ದಿನಗಳಿಂದ ಆಯೋಜಿಸಿದ್ದ ಸ್ವಾಗತ-ಪರಿಚಯ ಕಾರ್ಯಕ್ರಮದ ಸಮಾರೋಪ ಸಮಾರಂಭ ನಡೆಯಿತು.

ವಿ.ವಿ.ಯ ಕುಲಸಚಿವ ಪ್ರೊ.ಆರ್.ಆರ್.ಬಿರಾದಾರ ಅವರು ಮಾತನಾಡಿ ನಮ್ಮ ವಿದ್ಯಾರ್ಥಿಗಳು ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಹೊಸ ಹೊಸ ಅನ್ವೇಷಣೆಗಳನ್ನು ಹಾಗೂ ನವೀನತೆಯ ಸಂಶೋಧನೆ ಕೈಗೊಂಡು ಭಾರತವನ್ನು ವಿಶ್ವಮಟ್ಟದಲ್ಲಿ ಹೆಸರುವಾಸಿಯಾಗುವಂತೆ ನಾವೆಲ್ಲರೂ ಶ್ರಮವಹಿಸಬೇಕೆಂದು ಅವರು ಕರೆ ನೀಡಿದರು.

ದೇಶದಲ್ಲಿಯೇ ಸಿಯುಕೆಯು ಶೈಕ್ಷಣಿಕವಾಗಿ ಮತ್ತು ಸಂಶೋಧನೆಯ ಕ್ಷೇತ್ರಲ್ಲಿ ವೇಗವಾಗಿ ಬೆಳೆಯುತ್ತಿದೆ, ನಮ್ಮ ವಿ.ವಿ.ಯಲ್ಲಿ ಗುಣಮಟ್ಟದ ಮತ್ತು ಸುಸಜ್ಜಿತ ಪ್ರಯೋಗಾಲಯಗಳು, ಇ-ಗ್ರಂಥಾಲಯ ವ್ಯವಸ್ಥೆ, ಹಾಸ್ಟೆಲ್ ವ್ಯವಸ್ಥೆ, ಅಂತರ್ಜಾಲ ವ್ಯವಸ್ಥೆ, ಅನುಭವಿ ಕಲಿಕಾ ಭೋದನೆ ಸೇರಿದಂತೆ ಅನೇಕ ಪ್ರಯೋಜನಗಳಿವೆ. ವಿದ್ಯಾರ್ಥಿಗಳು ಇವೆಲ್ಲವನ್ನು ಉಪಯೋಗ ಮಾಡಿಕೊಂಡು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಹಾಗೂ ವಿ.ವಿ.ಯ ನೀತಿ ಸಂಹಿತೆಯನ್ನು ಕಡ್ಡಾಯವಾಗಿ ಪಾಲಿಸಬೇಕೆಂದು ಅವರು ಹೇಳಿದರು.

ವಿ.ವಿ.ಯ ಜೀವ ವಿಜ್ಞಾನ ವಿಭಾಗದ ಡೀನ್ ಪ್ರೊ.ಸತ್ಯನಾರಾಯಣ, ಕಂಪ್ಯೂಟರ್ ವಿಜ್ಞಾನ ಡೀನ್ ಪ್ರೊ.ಆರ್.ಎಸ್.ಹೆಗಡಿ, ರಸಾಯನಶಾಸ್ತ್ರ ಡೀನ್ ಪ್ರೊ.ಪಲ್ಲೆಪೋಗು ರಾಘವಯ್ಯ, ಇಂಜನೀಯರಿಂಗ್ ಡೀನ್ ಪ್ರೊ.ಅಮರೇಂದ್ರ ಮತ್ಸ, ಭೂವಿಜ್ಞಾನ ಡೀನ್ ಪ್ರೊ.ಪ್ರಶಾಂತ, ಭೌತಿಕ ವಿಜ್ಞಾನದ ಡೀನ್ ಪ್ರೊ.ರಾಜೀವ್ ಜೋಶಿ ಅವರು ತಮ್ಮ ವಿಭಾಗಗಳ ಶೈಕ್ಷಣಿಕ ಮಾಹಿತಿ ನೀಡಿದರು ವಿದ್ಯಾರ್ಥಿ ಕಲ್ಯಾಣ ಮತ್ತು ಕಾನೂನು ವಿಭಾಗದ ಡೀನ್ ಪ್ರೊ. ಬಸವರಾಜ್ ಎಂ. ಕುಬಕಡ್ಡಿ ಅವರು ವಿ.ವಿ.ಯ ನೀತಿ-ಸಂಹಿತೆ ಬಗ್ಗೆ ಮತ್ತು ವಿ.ವಿ.ಯ ಹಾಸ್ಟೆಲ್ ಮುಖ್ಯಸ್ಥರಾದ ಡಾ.ಬಸವರಾಜ ಅವರು ಹಾಸ್ಟೆಲ್ ವ್ಯವಸ್ಥೆ ಬಗ್ಗೆ ಮಾಹಿತಿ ನೀಡಿದರು.

ಪ್ರೊ.ಜನಾರ್ಧನ ರೆಡ್ಡಿ, ಪ್ರೊ.ನಾಗರಾಜ ಧಾರವಾಡಕರ, ಪ್ರೊ.ಚೈತನ್ಯ, ಪ್ರೊ.ವೆಂಕಟರಮಣ ದೊಡ್ಡಿ, ಪ್ರೊ.ಪ್ರಮೋಧ, ಪ್ರೊ.ರಾಜಶ್ರೀ ಹಾಗೂ ಡಿ.ಎಸ್.ಡಬ್ಲೂ ಸಿಬ್ಬಂದಿಗಳಾದ ಚರಣ್, ಅರುಕುಮಾರ್ ಸೇರಿದಂತೆ ಇತರರು ಉಪಸ್ಥಿತರಿದ್ದರು. ಡಾ. ವಾಣಿಶ್ರೀ ಅವರು ಕಾರ್ಯಕ್ರಮ ನಿರೂಪಣೆ ಮಾಡಿದರು. ಕಾರ್ಯಕ್ರಮವು ವಂದೇ ಮಾತರಂನೊಂದಿಗೆ ಆರಂಭವಾಗಿ ರಾಷ್ಟ್ರಗೀತೆಯೊಂದಿಗೆ ಸಮಾಪ್ತಿಯಾಯಿತು.

# ಆಯುರ್ವೇದ ಚಿಕಿತ್ಸಾ ಶಿಬಿರ

ಕಲಬುರಗಿ: ಪರಮ ಪೂಜ್ಯ ಸಂತ ಶ್ರೀ ಆಸಾರಾಮ್ ಜೀ ಬಾಪೂಜಿಯವರ ಪಾವನ ಪ್ರೇರಣೆಯಿಂದ ನಗರದ ಮೋಹನ್ ಲಾಡ್ಜ್ ಎದುರುಗಡೆ ಇರುವ ಸಂತ ಶ್ರೀ ಆಸಾರಾಮ್ ಜೀ ಆಶ್ರಮದಲ್ಲಿ ಪ್ರತೀ ತಿಂಗಳು ಆಯುರ್ವೇದ ತಪಾಸಣಾ ಶಿಬಿರವನ್ನು ಆಯೋಜಿಸಲಾಗುತ್ತಿದೆ.

ಈ ಶಿಬಿರವು ಪ್ರತೀ ತಿಂಗಳ ಮೊದಲ ಮತ್ತು ಮೂರನೇ ಗುರುವಾರ ಹಾಗೂ ಎರಡನೇ ಮತ್ತು ನಾಲ್ಕನೇ ಬುಧವಾರ ಮಧ್ಯಾಹ್ನ 2:30 ರಿಂದ ಸಂಜೆ 5:30 ರವರೆಗೆ ನಡೆಯುತ್ತದೆ.

ಈ ಶಿಬಿರದಲ್ಲಿ ರೋಗಗಳ ತಡೆಗಟ್ಟುವಿಕೆ ಮತ್ತು ಪ್ರಾಕೃತಿಕ ಚಿಕಿತ್ಸಾ ಪದ್ಧತಿಯಿಂದ ರೋಗಗಳನ್ನು ನಿವಾರಿಸಲು ಜೀವನಶೈಲಿಯಲ್ಲಿ ಬದಲಾವಣೆ ಕುರಿತು ಸಲಹೆ ಹಾಗೂ ಮಾರ್ಗದರ್ಶನ ನೀಡಲಾಗುತ್ತದೆ.

# ಹೂ ಎದೆಯ ಚುಂಬಿಸಲು ಇಬ್ಬನಿಯಾಗಿ ಕಾದಿರುವೆ

**ಉದಯರಶ್ಮಿ ದಿನಪತ್ರಿಕೆ**

ಪ್ರಿಯ ಹೃದಯದರಸಿ ರೂಪಾ

ನೀನು ನನ್ನ ಮನದರಸಿ. ಸಪ್ತಸಾಗರ ದಾಟಿ ಬಂದರೂ ಸಿಗದ ಅಪರೂಪದ ರೂಪವತಿ. ಶುಭ್ರ ಹಗಲು ನಾಚುವಂತಹ ಅಂದಗಾತಿ. ಚೆಂದದ ಚೆಲುವೆಯರೆಲ್ಲ ನಿನ್ನ ಮುಂದೆ ತೀರ ತೀರ ಸಪ್ಪೆ ಎನಿಸುವಂತಹ ಸೊಗಸುಗಾತಿ. ಮಾತುಗಳೇ ಇಲ್ಲದ ಮೌನದಲ್ಲೂ ಎಲ್ಲವನ್ನೂ ಹೇಳಬಲ್ಲ ಮಾಯಗಾತಿ. ಹೃದಯ ಕದ್ದ ಚೋರಿ ಅಷ್ಟೇ ಅಲ್ಲ ಹೃದಯ ಸಾಮ್ರಾಜ್ಯದ ಅರಸಿ. ಒಲವನು ಉಣಬಡಿಸುತ್ತ ಜೀವನ ಸಂಭ್ರಮಿಸುವ ಕಲೆ ಕಲಿಸಿದ ರಾಜ-ಕುಮಾರಿ. ಆ ದೇವರು ಪುರುಸೊತ್ತು ಮಾಡಿಕೊಂಡು ತಿದ್ದಿ ತೀಡಿ ಮಾಡಿದ ಶ್ವೇತ ಭಾವದ ಶ್ವೇತಾಂಬರಿ. ಸರಳ ಜೀವನ ಉನ್ನತ ಚಿಂತನೆಯ ಕರುಣಾಮಯಿ. ಮೃದು ಸ್ವಭಾವದ ಕ್ಷಮಯಾಧ-ರಿತ್ರಿ.. ನಿನ್ನ ಅಂದ ಚೆಂದಕೆ ಮರುಳಾಗದವರು ಯಾರೂ ಇಲ್ಲ. ಹೀಗಾಗಿಯೇ ನನ್ನ ಹೃದಯಂಗಳದಲ್ಲಿ ಒಲವಿನ ಬಳ್ಳಿ ನನ್ನ ಅರಿವಿಗೆ ಬರದಂತೆ ಆಕಾಶದತ್ತ ಮುಖ ಮಾಡಿದೆ. ಕಂಗಳ ಹೊಳಪಿಗೆ ಮುದ್ದಾದ ದುಂಡು ಮುಖಕ್ಕೆ ಮುಗ್ಧ ನಗುವಿಗೆ ಸುಮಧುರ ಕಂಠಕೆ ಸ್ನೇಹ ಸಿಂಚನಕೆ ಮರುಳಾದೆ.

ಕನಸುಗಳೇ ಜೀವನದ ಜೀವ. ಕನಸಿಲ್ಲದೇ ಜೀವನವನ್ನು ಮುಂದೂಡುವುದು ಬಲು ಕಷ್ಟ. ಕನಸುಗಳು ಅಷ್ಟು ಸಲೀಸಾಗಿ ಈಡೇರುವುದಿಲ್ಲ. ಕೆಲವೊಮ್ಮೆ ವಿಧಿ ನಮ್ಮ ಕನಸುಗಳನ್ನು ಮು-ರಿಯುತ್ತದೆ. ಇನ್ನೂ ಕೆಲವೊಮ್ಮೆಯಂತೂ ನುಚ್ಚುನೂರು ಮಾಡುತ್ತದೆ. ಹೀಗೆಲ್ಲ ಇದ್ದಾಗ್ಯೂ ಕನಸುಗಳನ್ನು ಎಂದೆಂದಿಗೂ ಒಣಗಲು ಬಿಡಬಾರದೆಂದು ಕಲಿಸಿಕೊಟ್ಟವಳು ನೀನು. ಅಪ್ಪ ಸಾಲ ಮಾಡಿ ಬೀಜ ಖರೀದಿಸಿ ಪ್ರತಿದಿನ ಆಕಾಶ ನೋಡಿದ. ಮಳೆರಾಯ ಇಳೆಗೆ ಇಳಿಯಲೇ ಇಲ್ಲ. ಹೊಟ್ಟೆಯ ಹಿಟ್ಟಿಗೂ ಪರದಾಡುವ ಪರಿಸ್ಥಿತಿ ಬಂದಾಗ ಬೆಳೆಯನ್ನು ಕಾಣದೆ ಕಂಗಾಲದ. ಸಾಲ ನೀಡಿದವರು ಮನೆ ಮುಂದೆ ಬಂದು ನಿಂತಾಗ ಆದ ಅವಮಾನ



ತಾಳದೇ ನೇಣಿಗೆ ಶರಣಾದ. ಹುಟ್ಟಿನಿಂದ ಕಷ್ಟದಲ್ಲಿಯೇ ಮುಳುಗಿದ್ದ ಅಪ್ಪ ನನಗೆ ಬೇಕಾದ ಶಿಕ್ಷಣ ಕೊಡಿಸಲು ಪಟ್ಟ ಕಷ್ಟ ಅಷ್ಟಿಷ್ಟಲ್ಲ. ನನ್ನನ್ನು ಮುದ್ದಿನಿಂದ ಸಾಕಿದ ಅಪ್ಪನನ್ನು ಇನ್ಮೇಲೆ ಚೆನ್ನಾಗಿ ನೋಡಿಕೊಳ್ಳಬೇಕೆನ್ನುವ ಮಹದಾಸೆಯಿಂದ ಉದ್ಯೋಗ ಅರಸಲು ಆರಂಭಿಸಿದ್ದೆ. ಮನೆಯ ಯಜಮಾನನೇ ಇಲ್ಲವಾದ ಮೇಲೆ ಪೂರಾ ಪೂರಾ ಕುಗ್ಗಿದ್ದೆ.

ಬದುಕಿನಲ್ಲಿ ಕೈಚೆಲ್ಲಿದ ಕ್ಷಣಗಳವು. ಆಗ ನನ್ನ ಜೀವನದ ಗುಡಿಸಲಿಗೆ ಬಲಗಾಲಿಟ್ಟು ಒಳಬಂದವಳೇ ನೀನು. ಮಾಮರ



ಚಿಗುರಿಗೆ ಜೀವ ಪಡೆಯುವ ಕೋಗಿಲೆಯಂತೆ ಆದೆ ನಾನು. ಕನಸಿನ ಬೇರು ಜೀವಂತವಾಗಿದ್ದರೆ ಮತ್ತೆ ಚಿಗುರುತ್ತದೆ. ಜೀವನದ ಮೇಲಿನ ನಂಬಿಕೆ ಜೀವಂತವಾಗಿದ್ದರೆ, ಜೀವನ ಅರಳುತ್ತದೆ. ಚಿಂತಿಸಬೇಡ ಎಲ್ಲವೂ ಒಳ್ಳೆಯದಾಗುತ್ತದೆ ಎಂದು ಭರವಸೆ ತುಂಬಿದ ನಿನ್ನ ಮಾತುಗಳು ಇಂದಿಗೂ ಅನುರುಣಿಸುತ್ತಿವೆ. ಮಾಡುವ ಕೆಲಸದ ಹಿಂದೆ ಗಿರಕಿ ಹೊಡೆಯುವುದನ್ನು ಕಲಿಸಿದೆ. ಸಹನೆ ಇದ್ದರೆ ಜೀವನ ಒಣಗದು. ಎಂದೆಲ್ಲ ಬುದ್ಧಿ ಮಾತು ಹೇಳಿದೆ. ವಿಜಯ ಪಥದಲ್ಲಿ ನಡೆಯಲು ಕಲಿಸಿದ ಗುರು ನೀನು. ಮಳೆಗಾಲಕ್ಕೆ ಸೋರದ, ಬಿರುಗಾಳಿಗೆ ಬೀಳದ ಗಟ್ಟಿ ಜೀವನ ಕಟ್ಟಲು ಹೇಳಿಕೊಟ್ಟೆ. ಒಲವಿಗೆ ಹೊಸ ವ್ಯಾಖ್ಯಾನ ಬರೆದಿದ್ದೆ. ಇನ್ನೆಂದೂ ಬದುಕನ್ನು ಚೆನ್ನಾಗಿ ಜೋಡಿಸಲು ಸಾಧ್ಯವಿಲ್ಲ ಎಂದು ನೊಂದುಕೊಂಡವನ ಪಾಲಿಗೆ ನಿನ್ನೊಲವು ವರವಾಗಿ ಸಿಕ್ಕಿತ್ತು. ಇದ್ದಕ್ಕಿದ್ದಂತೆ ಎರಡೆರಡು ಸಂತೋಷ ಒಟ್ಟಿಗೆ ಸಿಕ್ಕಂತಾಗಿತ್ತು. ಮಾತಿನಲ್ಲಿ ಹೇಳಲಾಗದಷ್ಟು ಖುಷಿಪಟ್ಟಿದ್ದೆ. ದಿನ ರಾತ್ರಿ ಮನಸ್ಸು ಸ್ಮೃತಿಯ ಬಾಗಿಲು ತೆರೆದು ನಿನ್ನೊಂದಿಗೆ ಕಳೆದ ರಸನಿಮಿಷಗಳ, ನೆನಪುಗಳ ಹೆಕ್ಕುತ್ತ ಹಾಸಿಗೆಯ ಮೇಲೆ ಉರುಳಾಡುತ್ತಿತ್ತು. ನೆನಪುಗಳ ಅಲೆಯಲ್ಲಿ ಮೈ ತನ್ನಷ್ಟಕ್ಕೆ ತಾನೆ ಬೆಚ್ಚಗಾಗುತ್ತಿತ್ತು.

ಅದೊಂದು ಮುಸ್ಸಂಜೆ ಊರಿನ ಹೊರವಲಯದಲ್ಲಿ ಕಲ್ಲು ನೆಲದೊಳಗೆ ಕುಳಿತು ನಿನಗಾಗಿ ಕಾಯುತ್ತಿದ್ದೆ. ಶ್ವೇತ ಬಣ್ಣದವಳ, ಗುಲಾಬಿ ಬಣ್ಣದ ಎಸಳಿನ ತುಟಿಯವಳ ನೆನೆಯುತ್ತಿದ್ದೆ. ಆ ನೆನಪು ಮನಸ್ಸನ್ನು ಸುಂದರ ಕನಸುಗಳೊಂದಿಗೆ ತೋಯಿಸಿತ್ತು. ನೀಳ ತೋಳನ್ನು ಬಯಸಿತ್ತು. ವಾಸ್ತವದ ಪರಿವೆಯಿಲ್ಲದೇ, ನನ್ನದೇ ಲೋಕದಲ್ಲಿ ಸಂತೋಷದಿಂದ ಆಕಾಶದಲ್ಲಿ ತೇಲುತ್ತಿದ್ದಾಗಲೇ ನಿನ್ನ ಆಗಮನವಾಯಿತು. ಮೊದಲ ಸಲ ನಿನ್ನ ಪಕ್ಕ ಭುಜಕ್ಕೆ ಭುಜ ತಾಗಿಸಿ ಕುಳಿತುಕೊಳ್ಳುವ ಬಹುದಿನದ ಕನಸು ನನಸಾದಂತಾಗಿ-ತ್ತು. ನನಗೆ ಇಂತಹ ಒಂದು ಅವಕಾಶ ಸಿಗಬಹುದೆಂಬ ಕಲ್ಪನೆ ಸಹ ನನಗಿರಲಿಲ್ಲ. ಅಂದು ನಿನ್ನ ಹುಟ್ಟುಹಬ್ಬವಾಗಿತ್ತು. ಆದರೆ ನಿನ್ನ ರೂಪದಲ್ಲಿ ನನಗೆ ಅತ್ಯಮೂಲ್ಯ ಕಾಣಿಕೆ ಸಿಕ್ಕಿತ್ತು. ಮನೆಯಲ್ಲಿ ಸಿಕ್ಕಿದ್ದರೆ ದೂರದಿಂದಲೇ ನೋಡಿ ಸಂತೋಷ ಪಡಬೇಕಾಗುತ್ತಿತ್ತು. ಆದರೆ ಈಗ ನನ್ನ ತೀರ ಹತ್ತಿರದಲ್ಲಿ ಕುಳಿತಿದ್ದು ನಿನ್ನ ಇರುವಿಕೆ ನನ್ನ ಆನಂದವನ್ನು ಇಮ್ಮಡಿಗೊಳಿಸಿತ್ತು. ಹೃದಯ ಹೊರ ಬಂದು ಬಿಡುವಷ್ಟು ಜೋರಾಗಿ ನೃತ್ಯ ಮಾಡುತ್ತಿತ್ತು.

ಬೆಳದಿಂಗಳ ಚುಕ್ಕಿಯು ಮೆಲ್ಲನೆ ಭೂಮಿಗೆ ಜಾರುತ್ತಿತ್ತು. ಮೊದಲ ಮಳೆಯ ಮೊದಲ ಹನಿಯೊಂದು ಇಳೆಯ ಚುಂಬಿಸಿತು. ಬರಬರುತ್ತ ರಭಸ ಹೆಚ್ಚಿಸಿಕೊಂಡಿತು. ಮೈ ಒದ್ದೆಯಾಯಿತು. ಮೈಯಲ್ಲಿ ನಡುಕ ಶುರುವಾಯಿತು. ಒದ್ದೆಯಾದ ದಟ್ಟ ಕಪ್ಪು ಕೂದಲನು ಒರೆಸಿಕೊಳ್ಳುವಲ್ಲಿ ನಿರತಳಾದ ನಿನ್ನ ಬೆರಳು ನನ್ನ ಸೋಕಿತು ಮೈಯೆಲ್ಲ ಜುಮ್ಮೆಂದಿತು. ನೀ ಮುಡಿಗೆ ಮುಡಿದ ಪಾರಿಜಾತದ ಘಮಲು ಘಮ್ಮೆಂದಿತು. ನಿನ್ನ ಮುಖ ಕಮಲದಲ್ಲಿದ್ದ ಮಂದಹಾಸ ಮತ್ತಷ್ಟು ಹಿಗ್ಗಿತು. ಮನದಲ್ಲಿ ಮೆಲ್ಲನೇ ಒಲವಿನ ಅಮಲೇರಿತು. ನನಗರಿವಿಲ್ಲದೆ ನಿನ್ನ ಸನಿಹ ಸರಿದೆ. ಅಂತಹ ಸಲುಗೆ ಕಂಡಿರದ ನೀನು ಮುಜುಗರದಿಂದ ಮುದ್ದೆಯಾದೆ. ಸಂಕೋಚ ಬೇಡ ಸಖಿ ನಾನು ನಿನ್ನ ಆಪ್ತ ಸಖ ಎಂದೆ. ಕೆಲ ನಿಮಿಷಗಳಲ್ಲಿ ಇಬ್ಬರ ನಡುವಿನ ಅಂತರ ಕರಗಿ ಹೋಗಿತ್ತು. ಎದೆಗೆ ಅವುಚಿಕೊಂಡೆ. ಬಟ್ಟಲು ಕಂಗಳ, ಸೇಬಿನಂತಿರುವ ಕೆನ್ನೆಗಳ ಇಂಚಿಂಚು ಬಿಡದೆ ನನ್ನ ಅಧರಗಳು ಮುತ್ತಿಕ್ಕತೊಡಗಿದವು. ಈರ್ವರ ತೋಳುಗಳು ಬಾಚಿ ತಬ್ಬಿದ್ದವು. ನನ್ನ ಮುತ್ತುಗಳಿಗೆ ಪ್ರತಿಯಾಗಿ ಎರಡೂ ಕಂಗಳಿಗೆ ಬಿಡದೇ ನೀನಿತ್ತ ಮೃದು ಸಿಹಿಚುಂಬನಕ್ಕೆ ರೋಮಾಂಚಿತನಾದೆ. ಉಬ್ಬಿದೆದೆಗೆ ಕೈ ಹಾಕಲು ಮನಸ್ಸು ಒತ್ತಾಯಿಸುತ್ತಿತ್ತು. ಮನಸ್ಸಿನ ಚೆಲ್ಲಾಟದ ಭಾವನೆಗೆ ತುಂಬಾ ಪ್ರಯಾಸದಿಂದ ಕಡಿವಾಣ ಹಾಕಿದೆ. ನೀ ನೀಡಿದ ದೀರ್ಘ ಆಲಿಂಗನ ಹಿತ ತಂದಿತ್ತು. ಬಿಟ್ಟ ಕಣ್ಣು ಬಿಟ್ಟಂತೆ ನಮ್ಮೆಡೆ ನೋಡುತ್ತಿದ್ದ ಪಕ್ಕದಲ್ಲಿದ್ದ ಚಿಕ್ಕ ಜಲಧಾರೆ ಮೌನವಾಗಿ ಹುಟ್ಟಿ ಜಿನುಗುತ್ತಿತ್ತು. ನಮ್ಮಿಬ್ಬರ ಸರಸ ಸಲ್ಲಾಪ ಕಂಡು ಮುಗಳ್ನಗುತ್ತಿತ್ತು. ಒಲ್ಲದ ಮನಸ್ಸಿನಿಂದ ಕಾಲುಗಳು ಮನೆಯೆಡೆ ಹೆಜ್ಜೆ ಹಾಕಿದ್ದು ಸುಂದರ ನೆನಪು.

ಈ ಹೊತ್ತಿನ ದಿನಗಳಲ್ಲಿ ನಿನ್ನ ಹಾಗೆ ಇರುವವರು ತುಂಬ ವಿರಳ. ಮಾತುಗಳಿಗೆ ಬಣ್ಣ ಬಳಿದು ಕ್ಷಣಕ್ಷಣಕ್ಕೂ ಹೊರಳಸುವ ನಾಲಗೆಗಳೇ ಬಹಳ. ದೋಷಗಳ ಹುಡುಕುವುದರಲ್ಲೇ ಕಳೆದು ಹೋದವರ ನಡುವೆ ಹಂಸದಂತಿರುವ ನೀನು ಬಲು ಅಪರೂಪದವಳು. ನನ್ನ ಜೀವನದಲ್ಲಿ ದೀಪ ಹಚ್ಚಿದ ಕೈಗಳು. ಕೋಟಿ ಕೋಟಿ ಜನ್ಮದ ಪುಣ್ಯವೇನೋ ನಿನ್ನೀ ಒಲವಿನ ಆಸರೆ ದೊರೆಯಿತು ನನಗೆ. ಅವ್ವ ನಿನ್ನನ್ನು ತನ್ನ ಸೊಸೆಯಾಗಿ ಮನೆ ತುಂಬಿಸಿಕೊಳ್ಳಲು ಹಸಿರು ನಿಶಾನೆ ತೋರಿದ್ದಾಳೆ. ನಿನ್ನಪ್ಪ ಅಮ್ಮ ನನ್ನನ್ನು ಅಳಿಯನನ್ನಾಗಿಸಿಕೊಳ್ಳಲು ತುದಿಗಾಲಲ್ಲಿ ನಿಂತಿ-ದ್ದಾರೆ. ಹೆತ್ತವರ ಸಮ್ಮುಖದಲ್ಲಿ ಹಸೆಮಣೆಯೇರೋಣ ಸಪ್ತಪದಿ ತುಳಿಯೋಣ. ಹೂ ಎದೆಯ ಚುಂಬಿಸಲು ಇಬ್ಬನಿಯಾಗಿ ಕಾದಿರುವೆ. ಅರ್ಧಕ್ಕೆ ನಿಲ್ಲಿಸಿರುವ ಸರಸದಾಟವನು ದಿನವೂ ಅರ್ಧರಾತ್ರಿಯಲ್ಲಿ








ಪೂರ್ತಿಗೊಳಿಸೋಣ. ವರ್ಷ ತುಂಬುವುದರೊಳಗೆ ನನ್ನವ್ವನ ಕೈಗೊಂದು ಕಿಲಕಿಲ ನಗುವ ಮುದ್ದು ಮಗುವನು ನೀಡೋಣ. ಬಂದು ಬಿಡು ಷೋಡಸಿ.

ಇಂತಿ ನಿನ್ನ ಹೃದಯದರಸ

ಲೇಖನ
- ಜಯಶ್ರೀ.ಜೆ.ಅಬ್ಬಿಗೇರಿ.
ಇಂಗ್ಲೀಷ್ ಉಪನ್ಯಾಸಕರು
ಬೆಳಗಾವಿ
ಮೊ: 9449234142



# ಅತಿಥಿ ಉಪನ್ಯಾಸಕರ ಸೇವಾ ಭದ್ರತೆ: ಶಿಕ್ಷಣ ಸಚಿವರ ಮೊದಲ ಆದ್ಯತೆಯಾಗಲಿ

## ಅಭಿಮತ

■ ಉದಯರಶ್ಮಿ ದಿನಪತ್ರಿಕೆ

ಕರ್ನಾಟಕದ ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಅತಿಥಿ ಉಪನ್ಯಾಸಕರು ಹಲವು ವರ್ಷಗಳಿಂದ ಅತ್ಯಂತ ಮಹತ್ವದ ಪಾತ್ರವನ್ನು ನಿರ್ವಹಿಸುತ್ತಾ ಬಂದಿದ್ದಾರೆ. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರ ಕೊರತೆಯನ್ನು ನೀಗಿಸುವಲ್ಲಿ ಅತಿಥಿ ಉಪನ್ಯಾಸಕರ ಸೇವೆ ಅನಿವಾರ್ಯವಾಗಿದೆ. ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳು ಯಾವುದೇ ಅಡಚಣೆಯಾಗದಂತೆ ಪಾಠ-ಪ್ರವಚನ ನಡೆಸುವುದು, ಪರೀಕ್ಷಾ ಕಾರ್ಯಗಳಲ್ಲಿ ಭಾಗವಹಿಸುವುದು, ವಿವಿಧ ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಸಂಘಟಿಸುವುದು ಸೇರಿದಂತೆ ಅನೇಕ ಜವಾಬ್ದಾರಿಗಳನ್ನು ಅವರು ಸಮರ್ಥವಾಗಿ ನಿರ್ವಹಿಸುತ್ತಿದ್ದಾರೆ. ಆದರೆ, ಇಷ್ಟೊಂದು ಮಹತ್ವದ ಸೇವೆ ಸಲ್ಲಿಸುತ್ತಿದ್ದರೂ ಅತಿಥಿ ಉಪನ್ಯಾಸಕರು ಹಲವು ವರ್ಷಗಳಿಂದ ಸೇವಾ ಭದ್ರತೆಯ ಕೊರತೆ, ಕಡಿಮೆ ವೇತನ, ನೇಮಕಾತಿಯಲ್ಲಿನ ಅನಿಶ್ಚಿತತೆ ಹಾಗೂ ಸಾಮಾಜಿಕ ಭದ್ರತಾ ಸೌಲಭ್ಯಗಳ ಅಭಾವದಂತಹ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಪ್ರತಿ ಶೈಕ್ಷಣಿಕ ವರ್ಷದ ಆರಂಭದಲ್ಲಿ ಮರುನೇಮಕಾತಿಗಾಗಿ ಕಾಯುವ ಪರಿಸ್ಥಿತಿ ಅವರಲ್ಲಿ ಆತಂಕವನ್ನು ಉಂಟುಮಾಡುತ್ತದೆ. ಇದರಿಂದ ಅವರ ಕುಟುಂಬದ ಆರ್ಥಿಕ ಸ್ಥಿರತೆ ಹಾಗೂ ವೃತ್ತಿ ಭವಿಷ್ಯದ ಮೇಲೂ ಪರಿಣಾಮ ಬೀಳುತ್ತಿದೆ.

ರಾಜ್ಯದ ವಿವಿಧ ಜಿಲ್ಲೆಗಳಲ್ಲಿರುವ ಸಾವಿರಾರು ಅತಿಥಿ ಉಪನ್ಯಾಸಕರು ಉನ್ನತ ವಿದ್ಯಾರ್ಹತೆ ಹೊಂದಿದ್ದು, ಯುಜಿಸಿ ನಿಯಮಾನುಸಾರ ಅರ್ಹತೆಗಳನ್ನು ಪಡೆದಿದ್ದಾರೆ. ಹಲವರು ನೆಟ್, ಸೆಟ್ ಹಾಗೂ ಪಿಎಚ್.ಡಿ. ಪದವಿಗಳನ್ನು ಹೊಂದಿದ್ದರೂ, ಅವರಿಗೆ ಇನ್ನೂ ಶಾಶ್ವತ ಉದ್ಯೋಗದ ಭರವಸೆ ದೊರೆತಿಲ್ಲ. ಹಲವಾರು ವರ್ಷಗಳಿಂದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸೇವೆ ಸಲ್ಲಿಸುತ್ತಿದ್ದರೂ ಪ್ರತಿ ವರ್ಷ ಹೊಸದಾಗಿ ಅರ್ಜಿ ಸಲ್ಲಿಸಿ ನೇಮಕಾತಿಗಾಗಿ ಕಾಯಬೇಕಾಗಿರುವುದು ವಿಷಾದನೀಯ ಸಂಗತಿಯಾಗಿದೆ. ಇತ್ತೀಚೆಗೆ ಅಧಿಕಾರ ಸ್ವೀಕರಿಸಿರುವ ನೂತನ ಉನ್ನತ ಶಿಕ್ಷಣ ಸಚಿವರ ಮೇಲೆ ಅತಿಥಿ ಉಪನ್ಯಾಸಕರು ಅಪಾರ ನಿರೀಕ್ಷೆ ಇಟ್ಟುಕೊಂಡಿದ್ದಾರೆ. ಉನ್ನತ ಶಿಕ್ಷಣ ವ್ಯವಸ್ಥೆಯ ಸುಧಾರಣೆಯ ಜೊತೆಗೆ ಅತಿಥಿ ಉಪನ್ಯಾಸಕರ ಸಮಸ್ಯೆಗಳಿಗೂ ಆದ್ಯತೆ ನೀಡಬೇಕು ಎಂಬುದು ಅವರ ಒತ್ತಾಯವಾಗಿದೆ. ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಲು ಅತಿಥಿ ಉಪನ್ಯಾಸಕರ ಮನೋಸ್ಥೈರ್ಯ ಅತ್ಯಗತ್ಯ. ಆದ್ದರಿಂದ ಸೇವಾ ಭದ್ರತೆ ಒದಗಿಸುವುದು ಸರ್ಕಾರದ ಪ್ರಮುಖ ಕರ್ತವ್ಯವಾಗಿದೆ.





ಅತಿಥಿ ಉಪನ್ಯಾಸಕರ ಪ್ರಮುಖ ಬೇಡಿಕೆಗಳಲ್ಲಿ ಸೇವಾ ಭದ್ರತೆ,ಗೌರವಯುತ ಸಂಭಾವನೆ, ಹಾಗೂ ವಾರ್ಷಿಕ ವೇತನ ಪರಿಷ್ಕರಣೆ, ಅನುಭವಕ್ಕೆ ಮಾನ್ಯತೆ, ವೈದ್ಯಕೀಯ ಸೌಲಭ್ಯಗಳು ಹಾಗೂ ಇತರೆ ಸಾಮಾಜಿಕ ಭದ್ರತಾ ಯೋಜನೆಗಳ ವಿಸ್ತರಣೆ ಸೇರಿವೆ. ಸೇವಾ ಅವಧಿಗೆ ಅನುಗುಣವಾಗಿ ವಿಶೇಷ ಸೌಲಭ್ಯಗಳನ್ನು ಕಲ್ಪಿಸುವ ಕುರಿತು ಸರ್ಕಾರ ಗಂಭೀರವಾಗಿ ಚಿಂತಿಸಬೇಕಾಗಿದೆ. ಉನ್ನತ ಶಿಕ್ಷಣದ ಗುಣಮಟ್ಟವು ಕೇವಲ ಕಟ್ಟಡಗಳು ಅಥವಾ ಮೂಲಸೌಕರ್ಯಗಳಿಂದ ಮಾತ್ರ ಹೆಚ್ಚಾಗುವುದಿಲ್ಲ. ಉತ್ತಮ, ಅನುಭವಿ ಹಾಗೂ ನಿಷ್ಠಾವಂತ ಅತಿಥಿ ಉಪನ್ಯಾಸಕರಿಂದಲೇ ಶಿಕ್ಷಣದ ಗುಣಮಟ್ಟ ಹೆಚ್ಚುತ್ತದೆ. ಅತಿಥಿ ಉಪನ್ಯಾಸಕರು ತಮ್ಮ ಜ್ಞಾನ, ಅನುಭವ ಮತ್ತು ಸಮರ್ಪಣಾ ಮನೋಭಾವದಿಂದ ಸಾವಿರಾರು ವಿದ್ಯಾರ್ಥಿಗಳ ಭವಿಷ್ಯ ರೂಪಿಸುತ್ತಿದ್ದಾರೆ. ಅವರ ಸೇವೆಯನ್ನು ಗೌರವಿಸುವುದು ಎಂದರೆ ಶಿಕ್ಷಣ ವ್ಯವಸ್ಥೆಯನ್ನು ಗೌರವಿಸಿದಂತೆಯೇ ಆಗುತ್ತದೆ.

ನೂತನ ಉನ್ನತ ಶಿಕ್ಷಣ ಸಚಿವರು ಅತಿಥಿ ಉಪನ್ಯಾಸಕರ ಪ್ರತಿನಿಧಿಗಳೊಂದಿಗೆ ನೇರವಾಗಿ ಚರ್ಚಿಸಿ, ಅವರ ಸಮಸ್ಯೆಗಳನ್ನು ಆಲಿಸಿ, ಶಾಶ್ವತ ಪರಿಹಾರದ ದಿಕ್ಕಿನಲ್ಲಿ ಸ್ಪಷ್ಟ ನೀತಿಯನ್ನು ರೂಪಿಸಬೇಕು. ಸರ್ಕಾರದ ಮಟ್ಟದಲ್ಲಿ ಸೂಕ್ತ ನಿರ್ಧಾರಗಳನ್ನು ಕೈಗೊಂಡರೆ ಸಾವಿರಾರು ಉಪನ್ಯಾಸಕರ ಕುಟುಂಬಗಳಿಗೆ ನೆಮ್ಮದಿ ದೊರೆಯುವುದರ ಜೊತೆಗೆ ರಾಜ್ಯದ ಉನ್ನತ ಶಿಕ್ಷಣ ಕ್ಷೇತ್ರವೂ ಮತ್ತಷ್ಟು ಬಲಿಷ್ಠವಾಗಲಿದೆ.

ಉನ್ನತ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಯ ಕನಸು ನನಸಾಗಬೇಕಾದರೆ ಮೊದಲು ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ ಒದಗಿಸಬೇಕು. ಅತಿಥಿ ಉಪನ್ಯಾಸಕರ ಸೇವೆಗೆ ಗೌರವ, ಭದ್ರತೆ ಮತ್ತು ನ್ಯಾಯ ಒದಗಿಸುವ ಮೂಲಕ ನೂತನ ಉನ್ನತ ಶಿಕ್ಷಣ ಸಚಿವರು ಹೊಸ ಅಧ್ಯಾಯಕ್ಕೆ ನಾಂದಿ ಹಾಡಲಿ ಎಂಬುದು ಶಿಕ್ಷಣ ವಲಯದ ಹಾಗೂ ಅತಿಥಿ ಉಪನ್ಯಾಸಕರ ಏಕೈಕ ಆಶಯವಾಗಿದೆ.

ಲೇಖನ

■ ಅ ಡಾ.ಅಪ್ಪು ಏಮ್
ಉಪನ್ಯಾಸಕರು
ಅಥಣಿ



# ಸಚಿವ ಎಂ.ಬಿ.ಪಾಟೀಲ ಪ್ರವಾಸ ವಿವರ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಅವರು ಜಿಲ್ಲೆಯಲ್ಲಿ ಅಗಸ್ಟ್ 9 ಮತ್ತು 10 ರವರೆಗೆ ಪ್ರವಾಸ ಕೈಗೊಳ್ಳಲಿದ್ದಾರೆ.

ದಿ.9 ರವಿವಾರ ಬೆ.9-12ಗಂ. ವರೆಗೆ ವಿಜಯಪುರ ಜಿಲ್ಲೆಯ ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡಲಿದ್ದಾರೆ. ಮ.1ಗಂ. ತಿಕೋಟಾ ತಾಲೂಕಿನ ಬಿಜ್ಜರಗಿ ಗ್ರಾಮದಲ್ಲಿ ಹಂಜಗಿಸಿದ್ಧೇಶ್ವರ, ಹಿರೋಡೇಶ್ವರ ಮೂರ್ತಿ ಪ್ರತಿಷ್ಠಾಪನೆ, ಕಳಸಾರೋಹಣ ಹಾಗೂ ಕನಕದಾಸ ಸರ್ಕಲ್ ಉದ್ಘಾಟಣೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಮ.3ಗಂ. ಹಿರೇಮಠ ಸಹೋದರರು ನಗರದ ರಾಜಕುಮಾರ ಲೇಔಟ್ ನಲ್ಲಿ ನಿರ್ಮಿಸಿದ ನಿವಾಸಕ್ಕೆ ಭೇಟಿ ನೀಡಲಿದ್ದಾರೆ.

ದಿ.10 ಸೋಮವಾರ ಬೆ.9ಗಂ. ಟೋಯೋಟಾ ಕಂಪನಿ ಸಿಸ್‌ರ್ ಅನುದಾನದಲ್ಲಿ ಬಬಲೇಶ್ವರ ತಾಲೂಕಿನ ಹೆಬ್ಬಾಳಟ್ಟಿ ಸರ್ಕಾರಿ ಪ್ರೌಢಶಾಲೆ ಹೆಬ್ಬಾಳಟ್ಟಿ ನಾಲ್ಕು ಕೊಠಡಿ, ಮ.12ಗಂ. ಅರ್ಜುಣಗಿ ಕೆ.ಪಿ.ಎಸ್ ಶಾಲಾ ಕಟ್ಟಡ, ಪಿ.ಯು ಕಾಲೇಜ್ 4 ಕೊಠಡಿ ಉದ್ಘಾಟಿಸಲಿದ್ದಾರೆ. ನಂತರ ಮ.2ಗಂ. ಬೋಳಚಿಕ್ಕಲಕಿ ಸರ್ಕಾರಿ ಪ್ರೌಢಶಾಲೆಯ ನಾಲ್ಕು ಕೊಠಡಿ ಉದ್ಘಾಟಿಸುವರು. ನಂತರ ಮ.3ಗಂ. ಮಮದಾಪುರ ಕೋಕೋ ಕೋಲಾ ಕಂಪನಿ ಸಿ.ಎಸ್.ಆರ್ ಅನುದಾನದಲ್ಲಿ ಮಮದಾಪುರ ಐತಿಹಾಸಿಕ ಕೆರೆ ಅಭಿವೃದ್ಧಿ ಹಾಗೂ ಸೌಂದರ್ಯೀಕರಣಗೊಳಿಸುವ ಕಾಮಗಾರಿಗೆ ಚಾಲನೆ ನೀಡಲಿದ್ದಾರೆ.ನಂತರ ನೂತನವಾಗಿ ನಿರ್ಮಿಸಿದ ಬಸ್ ನಿಲ್ದಾಣ ಉದ್ಘಾಟಿಸಲಿದ್ದಾರೆ ಹಾಗೂ ಟೋಯೋಟಾ ಕಂಪನಿ ಸಿ.ಎಸ್.ಆರ್ ಅನುದಾನದಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಯ ನೂತನವಾಗಿ ನಿರ್ಮಿಸಲಾದ ನಾಲ್ಕು ಕೊಠಡಿಗಳನ್ನು ಮತ್ತು ಎರಡು ಕೊಠಡಿಗಳಲ್ಲಿ ವಿಜ್ಞಾನ ಕೇಂದ್ರ ಉದ್ಘಾಟಿಸಲಿದ್ದಾರೆ ಹಾಗೂ ಮಕ್ಕಳ ಆಟಿಕೆ ಸಾಮಗ್ರಿಗಳಿಗೆ ಚಾಲನೆ ನೀಡಲಿದ್ದಾರೆ ಎಂದು ಸಚಿವರ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

# ಇಂದು ಬರಪೀಡಿತ ಸ್ಥಳಗಳಿಗೆ ಸಚಿವ ಎಂ.ಬಿ.ಪಾಟೀಲ ಭೇಟಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಅವರು ರವಿವಾರ ಬೆಳಿಗ್ಗೆ 9 ಗಂಟೆಯಿಂದ ಮಧ್ಯಾಹ್ನ 12 ಗಂಟೆಯವರೆಗೆ ಜಿಲ್ಲೆಯಲ್ಲಿ ಬರಪೀಡಿತವಾದ ನಾನಾ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ.

ಮೊದಲಿಗೆ ನಾಗಠಾಣ ಮತಕ್ಷೇತ್ರದ ಹಿಟ್ಟಿನಹಳ್ಳಿಗೆ ಭೇಟಿ ನೀಡಲಿರುವ ಅವರು ಹತ್ತಿ ಬೆಳೆ ವೀಕ್ಷಣೆ ನಡೆಸಲಿದ್ದಾರೆ. ನಂತರ ಬಸವನ ಬಾಗೇವಾಡಿ ಮತಕ್ಷೇತ್ರದ ಮನಗೂಳಿಗೆ ತೆರಳಿ ಕಬ್ಬು, ಹತ್ತಿ ಹಾಗೂ ಉಳ್ಳಾಗಡ್ಡೆ ಬೆಳೆ ವೀಕ್ಷಿಸಲಿದ್ದಾರೆ. ಬಳಿಕ ಯರನಾಳ ಗ್ರಾಮಕ್ಕೆ ತೆರಳಿ ಸೂರ್ಯಕಾಂತಿ ಬೆಳೆ ವೀಕ್ಷಿಸಲಿದ್ದಾರೆ. ಅಲ್ಲಿಂದ ಬಸವನ ಬಾಗೇವಾಡಿಗೆ ತೆರಳಿ ತೊಗರಿ, ಹೆಸರು ಹಾಗೂ ಉಳ್ಳಾಗಡ್ಡೆ ಬೆಳೆ ವೀಕ್ಷಿಸಲಿದ್ದಾರೆ.

ನಂತರ ದೇವರ ಹಿಪ್ಪರಗಿ ಮತಕ್ಷೇತ್ರದ ಹೂವಿನ ಹಿಪ್ಪರಗಿಗೆ ತೆರಳಿ ಹತ್ತಿ ಬೆಳೆ ವೀಕ್ಷಿಸಲಿದ್ದಾರೆ. ಬಳಿಕ ಮುದ್ದೇಬಿಹಾಳ ಮತಕ್ಷೇತ್ರದ ಕೊಣ್ಣೂರಿಗೆ ತೆರಳಿ ತೊಗರಿ ಮತ್ತು ಹತ್ತಿ ಬೆಳೆ ವೀಕ್ಷಣೆ ಮಾಡಲಿದ್ದಾರೆ. ಹೂವಿನ ಹಿಪ್ಪರಗಿ ಮೂಲಕ ದೇವರ ಹಿಪ್ಪರಗಿಗೆ ಆಗಮಿಸಲಿರುವ ಸಚಿವರು ಬೊಮ್ಮನಜೋಗಿ ಕ್ರಾಸ್ ಬಳಿ ಕಬ್ಬು ಬೆಳೆ ವೀಕ್ಷಿಸಲಿದ್ದಾರೆ.

ಅಲ್ಲಿಂದ ಸಿಂದಗಿ ಮತಕ್ಷೇತ್ರದ ಕನ್ನೊಳ್ಳಿಗೆ ತೆರಳಿ ಕಬ್ಬು ಹಾಗೂ ಹತ್ತಿ ಬೆಳೆ ವೀಕ್ಷಿಸಿ ನಾಗಠಾಣ ಮತಕ್ಷೇತ್ರದ ಮದಭಾವಿ ಗ್ರಾಮಕ್ಕೆ ಆಗಮಿಸಿ ಸೂರ್ಯಕಾಂತಿ ಬೆಳೆ ವೀಕ್ಷಿಸಲಿದ್ದಾರೆ ಎಂದು ಸಚಿವರ ಕಚೇರಿಯ ಮಾಧ್ಯಮ ಪ್ರಕಟಣೆಯಲ್ಲಿ ಮಾಹಿತಿ ನೀಡಲಿದ್ದಾರೆ.

# ಬಿ.ಎಂ. ಮಠೋಳಿ ಗೆ 'ಶಿಕ್ಷಕ ಸೇವಾ ರತ್ನ' ಪ್ರಶಸ್ತಿ

■ ಉದಯರಶ್ಮಿ ದಿನಪತ್ರಿಕೆ



ಬಾಗಲಕೋಟೆ, (ಜಮಖಂಡಿ): ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿದ ನಿಷ್ಠಾವಂತ ಹಾಗೂ ಗಮನಾರ್ಹ ಸೇವೆ, ಶಾಲೆಯ ಅಭಿವೃದ್ಧಿ ಮತ್ತು ವಿದ್ಯಾರ್ಥಿಗಳ ಸರ್ವಾಂಗೀಣ ಪ್ರಗತಿಗೆ ನೀಡಿದ ಕೊಡುಗೆಯನ್ನು ಗುರುತಿಸಿ ಜಮಖಂಡಿ ತಾಲೂಕಿನ ಜಂಬಗಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ಸಹ ಶಿಕ್ಷಕ ಬಾಳಪ್ಪ ಮ. ಮಠೋಳಿ (ಬಿ.ಎಂ. ಮಠೋಳಿ) ಅವರಿಗೆ ರಾಜ್ಯಮಟ್ಟದ ಪ್ರತಿಷ್ಠಿತ 'ಶಿಕ್ಷಕ ಸೇವಾ ರತ್ನ' ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

ಕರ್ನಾಟಕ ರಾಜ್ಯ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಘಟಕ ಹಾಗೂ ಜಮಖಂಡಿ ತಾಲೂಕು ಘಟಕ ಮತ್ತು ವೀರೇಶ್ವರ ಪ್ರಕಾಶನ, ಜಮಖಂಡಿ ಇವರ ಸಹಯೋಗದಲ್ಲಿ ಶಿಕ್ಷಕರ ಶೈಕ್ಷಣಿಕ ಸೇವೆ ಹಾಗೂ ಸಾಧನೆಯನ್ನು ಗುರುತಿಸಿ ಈ ಪ್ರಶಸ್ತಿಯನ್ನು ಪ್ರದಾನ ಮಾಡಲಾಗಿದೆ.

ಪ್ರಶಸ್ತಿ ಪಡೆದ ಬಿ.ಎಂ. ಮಠೋಳಿ ಅವರನ್ನು ಸಹ ಶಿಕ್ಷಕರು,ವಿದ್ಯಾರ್ಥಿಗಳು,ಶಿಕ್ಷಣಾಭಿಮಾನಿಗಳು, ಸ್ನೇಹಿತರು ಹಾಗೂ ಗ್ರಾಮಸ್ಥರು ಅಭಿನಂದಿಸಿದ್ದಾರೆ.

# ಎಸ್‌ಐರ್: ಪರಿಷ್ಕೃತ ವೇಳಾಪಟ್ಟಿ ಪ್ರಕಟಿಸಿದ ಚುನಾವಣಾ ಆಯೋಗ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ ಐಆರ್) ವೇಳಾಪಟ್ಟಿಯನ್ನು ಚುನಾವಣಾ ಆಯೋಗ ಪರಿಷ್ಕರಿಸಿದ್ದು, ಮತಗಟ್ಟೆ ಮಟ್ಟದ ಅಧಿಕಾರಿಗಳು (ಬಿಎಲ್‌ಒ)ಗಳು ಮನೆ-ಮನೆ ಭೇಟಿ, ಪರಿಶೀಲನೆ ಪ್ರಕ್ರಿಯೆ ಆ.17 ರವರೆಗೆ ನಡೆಯಲಿದೆ. ಆ.17ರಂದು ಮತಗಟ್ಟೆಗಳ ಪುನಾರಚನೆ ಹಾಗೂ ಸರಿಹೊಂದಿಸುವ ಕಾರ್ಯ ನಡೆಯಲಿದೆ. ಕರಡು ಮತದಾರರ ಪಟ್ಟಿಯನ್ನು ಆ.24 ರಂದು ಪ್ರಕಟಿಸುವಂತೆ ಆಯೋಗ ಸೂಚಿಸಿದೆ. ಆಗಸ್ಟ್ 28 ರಿಂದ ಸೆಪ್ಟೆಂಬರ್ 23ರ ಅವಧಿಯವರೆಗೆ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸಲು ಅವಕಾಶ ಕಲ್ಪಿಸಿದೆ. ಆಗಸ್ಟ್ 24 ರಿಂದ ಅಕ್ಟೋಬರ್ 22ರವರೆಗೆ ನೋಟಿಸ್ ಹಂತ ಮತ್ತು ಆಕ್ಷೇಪಣೆಗಳ ವಿಲೇವಾರಿ ಮಾಡಲು ಸೂಚಿಸಿದೆ. ಅಕ್ಟೋಬರ್ 27ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುವುದೆಂದು ಆಯೋಗ ಸೂಚಿಸಿದೆ ಎಂದು ಜಿಲ್ಲಾಡಳಿತದ ಪ್ರಕಟಣೆ ತಿಳಿಸಿದೆ.

# ಸಂಗೀತ ಆಲಿಸಿದರೆ ಮನೋರೋಗ ದೂರ: ಡಾ.ಕೆ.ಗಿರಿಮಲ್ಲ

ಕಲಬುರಗಿ;ಮಕ್ಕಳು, ನಾವು ಸಂತೋಷದಿಂದ ಇರಬೇಕಾದರೆ ಸಂಗೀತ ಆಲಿಸಬೇಕು. ಇಂದಿನ ಮಕ್ಕಳಿಗೆ ಆಟ, ಪಾಠ, ಶಿಕ್ಷಣದೊಂದಿಗೆ ಸಂಗೀತವು ಬಹಳ ಅವಶ್ಯಕವಾಗಿದೆ. ನಾವು-ನೀವೆಲ್ಲ ಸಂಗೀತವು ಆಲಿಸಿದರೆ ಮನೋರೋಗ ದೂರವಾಗಬಲ್ಲದು ಎಂದು ಡಾ.ಕೆ. ಗಿರಿಮಲ್ಲ ಹೇಳಿದರು.

ಸುಖಿ ಕಲಾ ಭವನದಲ್ಲಿ ರವಿವರ್ಮ ಕಲಾ ಸಾಹಿತ್ಯ ಸಾಂಸ್ಕೃತಿಕ ಸೇವಾ ಸಂಸ್ಥೆ ವತಿಯಿಂದ ಆಯೋಜಿಸಿದ ಸುಮಧುರ ಸಂಗೀತ ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

# ಅಗಲಿದ ಪತ್ರಕರ್ತ ಬಾಬು ಮುರಾಳರಿಗೆ ಕಾನಿಪದಿಂದ ಶ್ರದ್ಧಾಂಜಲಿ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಜಿಲ್ಲೆಯ ಪತ್ರಿಕಾ ರಂಗದಲ್ಲಿ ಮೂರು ದಶಕಗಳ ಕಾಲ ಸೇವೆ ಸಲ್ಲಿಸಿ, ಯುವ ಪತ್ರಕರ್ತರಿಗೆ ಮಾರ್ಗದರ್ಶನ ನೀಡುವ ಮೂಲಕ ಹಲವು ಉತ್ತಮ ಬರಹಗಾರರನ್ನು ರೂಪಿಸಿದ ಹಿರಿಯ ಪತ್ರಕರ್ತ ಬಾಬು ಮುರಾಳ ಅವರ ಸೇವೆ ಸಮಾಜಕ್ಕೆ ಇನ್ನೂ ಅಗತ್ಯವಾಗಿತ್ತು ಎಂದು ವಿಜಯಪುರ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಅಶೋಕ ಯಡಳ್ಳಿ ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿ ಮುಖ್ಯರಸ್ತೆಯಲ್ಲಿರುವ ಪತ್ರಿಕಾ ಭವನದಲ್ಲಿ ಶನಿವಾರ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದಿಂದ ಆಯೋಜಿಸಿದ್ದ ಹಿರಿಯ ಪತ್ರಕರ್ತ ಬಾಬು ಮುರಾಳ ಅವರ ಶ್ರದ್ಧಾಂಜಲಿ ಸಭೆಯಲ್ಲಿ ಮಾತನಾಡಿದರು. ಬಾಬು ಮುರಾಳ ಅವರ ಕುಟುಂಬಕ್ಕೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಆರ್ಥಿಕ ನೆರವು ನೀಡಲಾಗುವುದು ಎಂದು ಭರವಸೆ ನೀಡಿದ ಅವರು, ಕುಟುಂಬದ ಸದಸ್ಯರಿಗೆ ದುಃಖವನ್ನು ಭರಿಸುವ ಶಕ್ತಿಯನ್ನು ದೇವರು ಕರುಣಿಸಲಿ ಎಂದು ಪ್ರಾರ್ಥಿಸಿದರು. ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯಕಾರಿಣಿ ಸಮಿತಿ ಸದಸ್ಯ ಪ್ರಕಾಶ ಬೆಣ್ಣೂರ ಮಾತನಾಡಿ, ಬಾಬು ಮುರಾಳ ಅವರು ಸಂಘದ ಬೆಳವಣಿಗೆಗೆ ಶ್ರಮಿಸುವುದರ ಜೊತೆಗೆ ಯುವ ಪತ್ರಕರ್ತರಿಗೆ ಮಾರ್ಗದರ್ಶನ ನೀಡಿದ್ದರು. ಅನೇಕ ಯುವ ಪತ್ರಕರ್ತರನ್ನು ಪತ್ರಿಕಾ ರಂಗಕ್ಕೆ ಪರಿಚಯಿಸಿ, ಸಮಾಜದಲ್ಲಿ ಉತ್ತಮ ಬರಹಗಾರರು ರೂಪುಗೊಳ್ಳಲು ಕಾರಣರಾದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದು ಸ್ಮರಿಸಿದರು.ಈ ಸಂದರ್ಭದಲ್ಲಿ ಕಾನಿಪ ಸಂಘದ ಜಿಲ್ಲಾ ಉಪಾಧ್ಯಕ್ಷರುಗಳಾದ ಶಶಿಕಾಂತ ಮೆಂಡೆಗಾರ, ಬಸವರಾಜ ಉಳ್ಳಾಗಡ್ಡಿ, ಖಜಾಂಚಿ ರಾಹುಲ್ ಆಪ್ಟೆ ಸೇರಿದಂತೆ ಸಂಘದ ಪದಾಧಿಕಾರಿಗಳು ಹಾಗೂ ಪತ್ರಕರ್ತರು ಉಪಸ್ಥಿತರಿದ್ದರು.

## ವಿಜಯಪುರ ನಗರದ ಕೋಟೆಗೋಡೆ ಸುತ್ತಮುತ್ತ ಮಳೆ ನೀರು ಹರಿವಿಗೆ ಅಡೆತಡೆ ತೆರವು

# ನಗರ ಸೌಂದರ್ಯೀಕರಣಕ್ಕೆ ನಗರಾಭಿವೃದ್ಧಿ ಪ್ರಾಧಿಕಾರ-ಪಾಲಿಕೆ ನಿರ್ಧಾರ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರದ ಶಿವಾಜಿ ಸರ್ಕಲ್‌ನಿಂದ ಲಿಂಗದಗುಡಿ ರಸ್ತೆ ಹಾಗೂ ಗಚ್ಚಿನ ಕಟ್ಟಿ ಕಾಲೋನಿಗೆ ಹೊಂದಿಕೊಂಡಿರುವ ಕೋಟೆಗೋಡೆ ಸುತ್ತಲೂ ಮಳೆ ನೀರು ಸರಾಗವಾಗಿ ಹರಿದು ಹೋಗಲು ಮತ್ತು ಪ್ರವಾಹ ಉಂಟಾಗದಂತೆ ತಡೆಯಲು ಬೃಹತ್ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ನಗರಾಭಿವೃದ್ಧಿ ಪ್ರಾಧಿಕಾರ ಹಾಗೂ ಮಹಾನಗರ ಪಾಲಿಕೆ ನಿರ್ಧರಿಸಲಾಗಿದೆ ಎಂದು ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಗಂಗಾಧರ ಸಂಬಣ್ಣಿ ತಿಳಿಸಿದರು.

ನಗರಾಭಿವೃದ್ಧಿ ಪ್ರಾಧಿಕಾರ ಹಾಗೂ ಪಾಲಿಕೆ ಆಯುಕ್ತರೊಂದಿಗೆ ನಡೆದ ಮಹತ್ವದ ಸಭೆಯಲ್ಲಿ ಈ ಕುರಿತು ವಿಸ್ತೃತವಾಗಿ ಚರ್ಚಿಸಲಾಯಿತು ಎಂದು ತಿಳಿಸಿದ ಅವರು, ಕೋಟೆಗಳ ಸುತ್ತಮುತ್ತಲೂ ಬೆಳೆದಿರುವ ಕಂಟಿ ಬೇಲಿ ಹಾಗೂ ಗಿಡ-ಗಂಟಿಗಳನ್ನು ಸಂಪೂರ್ಣವಾಗಿ ತೆರವುಗೊಳಿಸಲು ಉಭಯ ಅಧಿಕಾರಿಗಳು ತೀರ್ಮಾನಿಸಿದರು.

ಜೊತೆಗೆ ಕೋಟೆ ಕಂದಕದ ಸುತ್ತಮುತ್ತ ಹೂಳೆತ್ತಿ, ನೀರಿನ ಹರಿವಿಗೆ ಅನುಕೂಲವಾಗುವಂತೆ ಅಗಲೀಕರಣಗೊಳಿಸಲು ನಿರ್ಧರಿಸಿದರು.

ನೀರು ಸುಗಮವಾಗಿ ಹರಿಯಲು ತಡೆಗೋಡೆ ನಿರ್ಮಾಣ ಮತ್ತು ಮಾರ್ಗ ಮಧ್ಯೆದಲ್ಲಿರುವ ಅಡೆತಡೆಗಳನ್ನು ತೆರವುಗೊಳಿಸಲು ಸಭೆ ನಿರ್ಧರಿಸಿತು.

ಶಾಶ್ವತ ಪರಿಹಾರ: ಈ ಕಾಮಗಾರಿಗಳು ಪೂರ್ಣಗೊಂಡ ನಂತರ ಮಳೆಗಾಲದಲ್ಲಿ ನಗರದಲ್ಲಿ ನೀರು ನಿಲ್ಲುವ ಸಮಸ್ಯೆಗೆ ಶಾಶ್ವತ ಪರಿಹಾರ ಸಿಕ್ಕು ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಗಂಗಾಧರ ಸಂಬಣ್ಣಿ ತಿಳಿಸಿದರು.

ಇದೇ ಸಂದರ್ಭದಲ್ಲಿ ನಗರದ ಸೌಂದರ್ಯೀಕರಣಕ್ಕೆ ಸಂಬಂಧಿಸಿದಂತೆ ಹಲವು ಪ್ರಮುಖ ನಿರ್ಣಯಗಳನ್ನು ಕೈಗೊಳ್ಳಲಾಯಿತು.ಗಾಂಧಿ ವೃತ್ತದ ಮರು ನಿರ್ಮಾಣ ಹಾಗೂ ಅಭಿವೃದ್ಧಿ ಕಾಮಗಾರಿಗೆ ಪಾಲಿಕೆಯಿಂದ ಬೇಗಂ ತಲಾಬ್ ಕೆರೆ ಅಭಿವೃದ್ಧಿ ಕಾಮಗಾರಿ ಹಾಗೂ ಕೆರೆಯ ಬಂಡ್ ಕನೆಕ್ಟಿಂಗ್ ಕಾಮಗಾರಿ ಕೈಗೊಳ್ಳಲು ಹಾಗೂ ಮಹಾಬಲೇಶ್ವರ ನಗರ ಉದ್ಯಾನವನದ ಅಭಿವೃದ್ಧಿ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಸಭೆಯಲ್ಲಿ ಮಹಾನಗರ ಪಾಲಿಕೆ ಆಯುಕ್ತರಾದ ವಿಜಯ ಮೆಕ್ಕಳಕಿ, ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ರಾಜಶೇಖರ ಡಂಬಳ ಸೇರಿದಂತೆ ವಿವಿಧ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಂಗೀತದಿಂದ ಮನಸ್ಸಿಗೆ ಉಲ್ಲಾಸ

ಕಲಬುರಗಿ: ಸಂಗೀತ ಮತ್ತು ಸಾಂಸ್ಕೃತಿಕಪರಂಪರೆಯನ್ನುಬೆಳೆಸುವುದರ ಜೊತೆಗೆ ಈ ಭಾಗದ ಕಲಾವಿದರ ಹಾಗೂ ಸಂಗೀತಾಭಿಮಾನಿಗಳ ಹಿತದೃಷ್ಟಿಯಿಂದ ಸಂಗೀತ ಉಳಿಸಿ ಬೆಳೆಯುವುದು ನಮ್ಮ ನಿಮ್ಮೆಲ್ಲರ ಕರ್ತವ್ಯವಾಗಿದೆ ಜ್ಯೋತಿ ಬಿ.ಪಂಚಾಳ ಹೇಳಿದರು. ನಗರದ ಶಹಾಬಜಾರ ಬಡಾವಣೆಯ ಭಾಗ್ಯವಂತಿ ದೇವಸ್ಥಾನ ಆವರಣದಲ್ಲಿ ಭಾಗ್ಯಜ್ಯೋತಿ ಜನಪದ ಸಂಗೀತ ಸಂಸ್ಥೆ ಆಯೋಜಿಸಿದ್ದ," ಸಂಗೀತ ಸಂಭ್ರಮ" ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಂಗೀತವು ಮಾನವ ಜೀವನದ ಅವಿಭಾಜ್ಯ ಅಂಗವಾಗಿದ್ದು, 84 ಲಕ್ಷ ಜೀವಿಗಳಿಗೂ ಸಂಗೀತವನ್ನು ಆಲಿಸುವ ಸಹಜ ಹಂಬಲವಿದೆ. ಸಂಗೀತಕ್ಕೆ ದೇಶ, ಭಾಷೆ, ಜಾತಿ ಎಂಬ ಯಾವುದೇ ಗಡಿಗಳಿಲ್ಲ. ಅದು ನೇರವಾಗಿ ಹೃದಯವನ್ನು ಸ್ಪರ್ಶಿಸಿ ಮನಸ್ಸಿಗೆ ನೆಮ್ಮದಿ ನೀಡುವ ಶಕ್ತಿ ಹೊಂದಿದೆ ಎಂದು ಹೇಳಿದರು.

ಕಲ್ಯಾಣ ಕರ್ನಾಟಕ ಭಾಗವು ಅನೇಕ ಸಂಗೀತಗಾರರು, ವಾಗ್ಗೇಯಕಾರರು ಹಾಗೂ ಜನಪದ ಕಲಾವಿದರನ್ನು ದೇಶಕ್ಕೆ ನೀಡಿದೆ. ಈ ಭಾಗದ ಸಂಗೀತ ಪರಂಪರೆಯನ್ನು ಉಳಿಸಿ ಬೆಳೆಸಲು ಅಗತ್ಯವಿದೆ ಎಂದು ಅವರು ಅಭಿಪ್ರಾಯಪಟ್ಟರು.

ವೇದಿಕೆ ಮೇಲೆ ಶರಣಗೌಡ ಪಾಟೀಲ ಪಾಳಾ, ವೀರೇಂದ್ರ ಕುಮಾರ್ ನರೂಣಿ, ಪ್ರಸಾದ್ ಕುಮಾರ್ ಪಿ ಕೆ, ಕಲಾವಿದ ವೀರಣ್ಣ ಪಿ ಕಂಬಾರ್, ಅಂಬಾರಾಯ ಕೊಣೆ ವೇದಿಕೆ ಮೇಲೆ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ವಿವಿಧ ಕಲಾವಿದರು ಸುಗಮ ಸಂಗೀತ, ಭಕ್ತಿಗೀತೆ ಹಾಗೂ ಜನಪದ ಗೀತೆಗಳನ್ನು ಪ್ರಸ್ತುತಪಡಿಸಿ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರರಾದರು. ಸಂಗೀತಾಸಕ್ತರು, ಕಲಾವಿದರು ಹಾಗೂ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ನೆಮ್ಮದಿಯ ಬದುಕಿಗೆ ಪರಿಸರ ರಕ್ಷಿಸಿ: ಉಜ್ಜಯಿನಿ ಜಗದ್ಗುರುಗಳು

ಕಲಬುರಗಿ: ಎಲ್ಲರೂ ಎಲ್ಲೆಡೆ ಗಿಡಗಳನ್ನು ನೆಟ್ಟು ಪೋಷಿಸಿ ಬೆಳೆಸೋಣ, ಪರಿಸರವನ್ನು ಉಳಿಸುವುದು ಪ್ರಕೃತಿಯನ್ನು ಸಂರಕ್ಷಿಸುವುಲ್ಲದೇ ನಮ್ಮ ಬದುಕನ್ನು ಮತ್ತು ಮುಂದಿನ ಪೀಳಿಗೆಯ ಭವಿಷ್ಯವನ್ನು ಉಳಿಸುವ ಮಹಾ ಯಜ್ಞವಾಗಿದೆ ಎಂದು ಉಜ್ಜಯಿನಿ ಸದ್ಧರ್ಮ ಸಿಂಹಾಸನಾಧೀಶ್ವರ ಶ್ರೀ ಜಗದ್ಗುರು ಸಿದ್ಧಲಿಂಗ ರಾಜದೇಶಿಕೇಂದ್ರ ಶಿವಚಾರ್ಯ ಭಗತ್ಪಾದರು ನುಡಿದರು.

ಅವರು ನಗರದ ಸೊಗಸನಕೇರಿಯ ಶ್ರೀ ಗುರುಶಾಂತಲಿಂಗೇಶ್ವರ ಕಲ್ಯಾಣ ಮಂಟಪದಲ್ಲಿ ಸಿದ್ಧಾಂತ ಶಿಖಾಮಣಿ ವಚನ ಸಾಹಿತ್ಯ ಸಮನ್ವಯಾತ್ಮಕ, ಆಧ್ಯಾತ್ಮಿಕ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ಪರಿಸರವಾದಿ ಶೈಲೇಂದ್ರ ಕವಡಿಯವರು ಪ್ರತಿ ವರ್ಷ ಸಸಿಗಳನ್ನು ವಿತರಿಸುತ್ತಿದ್ದು ಅವರ ನಿಸ್ವಾರ್ಥ ಸೇವೆಯು ಅನುಕರಣೆಯಾಗಿದೆ ಎಂದರು.

ಆಳಂದ ಮಾಜಿ ಶಾಸಕರಾದ ಸುಭಾಷ ಗುತ್ತೇದಾರರವರ ಅಧ್ಯಕ್ಷತೆಯಲ್ಲಿ ಬೀದರ ಜಿಲ್ಲೆಯ ಪರಿಸರವಾದಿ ಶೈಲೇಂದ್ರ ಕವಡಿಯವರ ಉಪಸ್ಥಿತಿಯಲ್ಲಿ ಕೋಟಿ ಬಿಲ್ವವೃಕ್ಷದ ಆಂದೋಲನದ ಅಡಿಯಲ್ಲಿ ರೈತರಿಗೆ ಸಸ್ಯಗಳು ವಿತರಿಸಲಾಯಿತು. ಕಡಗಂಚಿಯ ವೀರಭದ್ರ ಶಿವಾಚಾರ್ಯ ಸ್ವಾಮಿಗಳ ಹಾಗೂ ಕೇದಾರನಾಥ ಎಸ್. ಕುಲಕರ್ಣಿ ನೇತೃತ್ವದಲ್ಲಿ ಕಾಯಕಯೋಗಿ ಸೇವಾ ಸಂಸ್ಥೆಯ ಅಡಿಯಲ್ಲಿ ರಕ್ತದಾನ ಶಿಬಿರದಲ್ಲಿ ಅನೇಕ ಜನರು ರಕ್ತದಾನ ಮಾಡಿದರು. ಪಾಳಾದ ಡಾ. ಗುರುಮೂರ್ತಿ ಶಿವಾಚಾರ್ಯರು, ಚಂದನಕೇರಾದ ರಾಚೋಟೇಶ್ವರ ಶಿವಾಚಾರ್ಯರು, ಚಿಣಮಗೇರಿ ವೀರಮಹಾಂತ ಶಿವಾಚಾರ್ಯರು, ಶಿವಲಿಂಗೇಶ್ವರ ಶಿವಾಚಾರ್ಯರು, ಸಿದ್ದನಕೇರಾದ ಹೊನ್ನಲಿಂಗೇಶ್ವರ ಸ್ವಾಮಿಗಳು, ಮುದ್ನಾಳದ ಮುರುಗೇಂದ್ರ ದೇವರು, ಸುಲೇಪೇಟ, ಕಡಗಂಚಿಯ ಶ್ರೀಗಳು, ಕಪನೂರಿನ ಮಲ್ಲಕಾರ್ಜುನಸ್ವಾಮಿ ಟೇಂಗಳಿ ಉಪಸ್ಥಿತರಿದ್ದರು. ಶ್ರೀಮತಿ ಗೌರಿ ಚಿಂಚಕೋಟಿ ಬಿ.ಜೆ.ಪಿ. ಮಹಿಳಾಮೋರ್ಚಾ ಅಧ್ಯಕ್ಷರು, ಆನಂದರಾವ ಪಾಟೀಲ, ಚಂದ್ರಕಾಂತ ಭೂಸನೂರ, ನಾಗಯ್ಯಸ್ವಾಮಿ, ಶರಣಬಸಪ್ಪ ಬೆಣ್ಣೂರ, ಜಗದೀಶ ಬಿರಾದಾರ, ಸ್ವಾಗತಿಸಿದರು.

# ಚಿತ್ರದುರ್ಗದಲ್ಲಿ ಆ.10ರಂದು ಕೆಆರ್‌ಎಸ್ ಪಕ್ಷದ ಸಂಸ್ಥಾಪನಾ ದಿನಾಚರಣೆ

## ಸ್ವಚ್ಛ ರಾಜಕಾರಣದ ಸಂಕಲ್ಪದೊಂದಿಗೆ ರಾಜ್ಯಮಟ್ಟದ ಬೃಹತ್ ಸಮಾವೇಶ । ಚುನಾವಣೆಗಳಿಗೆ ಸಂಘಟನೆ ಬಲಪಡಿಸುವ ತಯಾರಿ

■ **ಉದಯರಶ್ಮಿ ದಿನಪತ್ರಿಕೆ**

ಚಡಚಣ: ಭ್ರಷ್ಟಾಚಾರಮುಕ್ತ, ಪಾರದರ್ಶಕ ಹಾಗೂ ಜನಪರ ರಾಜಕಾರಣಕ್ಕೆ ಒತ್ತು ನೀಡುತ್ತಿರುವ ಕರ್ನಾಟಕ ರಾಷ್ಟ್ರ ಸಮಿತಿ (ಕೆಆರ್‌ಎಸ್) ಪಕ್ಷದ 7ನೇ ಸಂಸ್ಥಾಪನಾ ದಿನಾಚರಣೆ ಹಾಗೂ ರಾಜ್ಯಮಟ್ಟದ ಬೃಹತ್ ಸಮಾವೇಶವು ಆ.10ರಂದು ಚಿತ್ರದುರ್ಗದ ಮುರುಘರಾಜೇಂದ್ರ ಕ್ರೀಡಾಂಗಣದಲ್ಲಿ ನಡೆಯಲಿದೆ.

ಪಕ್ಷದ ಏಳು ವರ್ಷಗಳ ಹೋರಾಟದ ಪಯಣವನ್ನು ಸ್ಮರಿಸುವುದರ ಜತೆಗೆ ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಿಗೆ ಪಕ್ಷವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಸಮಾವೇಶ ಆಯೋಜಿಸಲಾಗಿದೆ. ಪಕ್ಷದ ಸಂಸ್ಥಾಪಕ ಹಾಗೂ ಗೌರವಾಧ್ಯಕ್ಷ ರವಿ ಕೃಷ್ಣಾರೆಡ್ಡಿ ಅವರು ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದು, ರಾಜ್ಯದ ವಿವಿಧ ಜಿಲ್ಲೆಗಳಿಂದ ಪಕ್ಷದ ಸದಸ್ಯರು, ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಬೆಂಬಲಿಗರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲಿದ್ದಾರೆ.

ಹಣ, ಹೆಂಡ, ಆಮಿಷದ ರಾಜಕಾರಣಕ್ಕೆ ಪರ್ಯಾಯ : 2019ರ ಆ.10ರಂದು ರವಿ ಕೃಷ್ಣಾರೆಡ್ಡಿ ಅವರ ನೇತೃತ್ವದಲ್ಲಿ ಸ್ಥಾಪನೆಯಾದ ಕೆಆರ್‌ಎಸ್ ಪಕ್ಷವು ಹಣ, ಹೆಂಡ ಹಾಗೂ ಆಮಿಷಗಳ ರಾಜಕಾರಣಕ್ಕೆ ಪರ್ಯಾಯವಾಗಿ ಸಿದ್ಧಾಂತಾಧಾರಿತ, ಪಾರದರ್ಶಕ ಮತ್ತು ಸಾಮಾನ್ಯ ಜನರೇ ಮುನ್ನಡೆಸುವ ರಾಜಕೀಯ ವ್ಯವಸ್ಥೆ ನಿರ್ಮಿಸುವ ಆಶಯದೊಂದಿಗೆ ಕಾರ್ಯನಿರ್ವಹಿಸುತ್ತಿದೆ.

ದಶಕಗಳಿಂದ ರಾಜ್ಯದ ರಾಜಕಾರಣದಲ್ಲಿ ಪ್ರಭಾವ ಬೀರುತ್ತಿರುವ ಕೆಲವೇ ರಾಜಕೀಯ ಕುಟುಂಬಗಳ ಹಿಡಿತದಿಂದ ವ್ಯವಸ್ಥೆಯನ್ನು ಮುಕ್ತಗೊಳಿಸಿ, ಸಾಮಾನ್ಯ ನಾಗರಿಕರು ಹಾಗೂ ಯುವಜನರು ರಾಜಕೀಯದ ಮುಂಚೂಣಿಗೆ ಬರಬೇಕು ಎಂಬುದು ಪಕ್ಷದ ಪ್ರಮುಖ ಧ್ಯೇಯವಾಗಿದೆ ಎಂದು ಪಕ್ಷ ತಿಳಿಸಿದೆ.




### ಜನರ ಕಿರು ದೇಣಿಗೆಯೇ ಪಕ್ಷದ ಬಲ

ರೂ. 100 ಹಾಗೂ ರೂ. 1,000 ದೇಣಿಗೆ ಆಧಾರಿತ ಸದಸ್ಯತ್ವ ವ್ಯವಸ್ಥೆಯ ಮೂಲಕ ಏಖಖ ಪಕ್ಷವು 67 ಸಾವಿರಕ್ಕೂ ಅಧಿಕ ನೋಂದಾಯಿತ ಸದಸ್ಯರನ್ನು ಹೊಂದಿದೆ. ದೊಡ್ಡ ಪ್ರಮಾಣದ ಹಣಕಾಸಿನ ನೆರವು ಅಥವಾ ರಾಜಕೀಯ ಪ್ರಾಯೋಜಕರನ್ನು ಅವಲಂಬಿಸದೆ ಜನರ ಕಿರು ದೇಣಿಗೆ (ಕ್ರೌಡ್ ಫಂಡಿಂಗ್) ಮೂಲಕ ಸಂಘಟನೆಯನ್ನು ಬೆಳೆಸಿಕೊಂಡಿರುವುದಾಗಿ ಪಕ್ಷ ತಿಳಿಸಿದೆ.

ಕಳೆದ ಏಳು ವರ್ಷಗಳ ಹೋರಾಟದಲ್ಲಿ ನಾಡಿನ ಜನತೆ ನೀಡಿರುವ ಬೆಂಬಲವೇ ಪಕ್ಷದ ಪ್ರಮುಖ ಶಕ್ತಿಯಾಗಿದೆ. ಸಂಸ್ಥಾಪನಾ ದಿನಾಚರಣೆ ಕೇವಲ ವಾರ್ಷಿಕೋತ್ಸವಕ್ಕೆ ಸೀಮಿತವಾಗದೆ, ಭ್ರಷ್ಟಾಚಾರಮುಕ್ತ, ಪಾರದರ್ಶಕ ಹಾಗೂ ಜನಪರ ಕರ್ನಾಟಕ ನಿರ್ಮಾಣದ ಸಂಕಲ್ಪವನ್ನು ಮತ್ತೊಮ್ಮೆ ಘೋಷಿಸುವ ವೇದಿಕೆಯಾಗಲಿದೆ ಎಂದು ಪಕ್ಷ ಹೇಳಿದೆ.

ಭ್ರಷ್ಟಾಚಾರಮುಕ್ತ ಆಡಳಿತಕ್ಕೆ ಒತ್ತಾಯ: ಸರ್ಕಾರಿ ಕಚೇರಿಗಳಲ್ಲಿ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಿ ಪಾರದರ್ಶಕ ಆಡಳಿತ ಜಾರಿಗೊಳಿಸಬೇಕು. ಲಂಚ, ಮಧ್ಯವರ್ತಿಗಳ ಹಸ್ತಕ್ಷೇಪ ಅಥವಾ ರಾಜಕೀಯ ಪ್ರಭಾವವಿಲ್ಲದೆ ಜನರಿಗೆ ನಿಗದಿತ ಅವಧಿಯಲ್ಲಿ ಸರ್ಕಾರಿ ಸೇವೆ ಹಾಗೂ ನ್ಯಾಯ ದೊರೆಯುವ ವ್ಯವಸ್ಥೆ ನಿರ್ಮಾಣವಾಗಬೇಕು ಎಂಬುದು ಕೆ ಆರ್ ಎಸ್ ಪಕ್ಷದ ನಿಲುವಾಗಿದೆ.

ರಾಜ್ಯದಲ್ಲಿ ಖಾಲಿ ಇರುವ ಲಕ್ಷಾಂತರ ಸರ್ಕಾರಿ ಹುದ್ದೆಗಳನ್ನು ಪಾರದರ್ಶಕವಾಗಿ ಶೀಘ್ರ ಭರ್ತಿ ಮಾಡಬೇಕು. ಕೃಷಿ ಕ್ಷೇತ್ರದಲ್ಲಿ ವೈಜ್ಞಾನಿಕ ಬೆಳೆ ಯೋಜನೆ ರೂಪಿಸುವುದರ ಜತೆಗೆ ರೈತರಿಗೆ ನ್ಯಾಯಸಮ್ಮತ ಬೆಲೆ, ಖಚಿತ ಮಾರುಕಟ್ಟೆ ಹಾಗೂ ಲಾಭದಾಯಕ ಬೆಂಬಲ ಬೆಲೆ ದೊರೆಯುವಂತಹ ನೀತಿಗಳನ್ನು ಜಾರಿಗೊಳಿಸಬೇಕು ಎಂದು ಪಕ್ಷ ನಿರಂತರವಾಗಿ ಆಗ್ರಹಿಸುತ್ತಿದೆ.

ಚುನಾವಣಾ ಅಖಾಡದಲ್ಲಿ ನಿರಂತರ ಸ್ಪರ್ಧೆ:ಪಕ್ಷ ಸ್ಥಾಪನೆಯಾದ ಬಳಿಕ ನಡೆದ ವಿವಿಧ ಚುನಾವಣೆಗಳಲ್ಲಿ ನಿರಂತರವಾಗಿ ಸ್ಪರ್ಧಿಸುತ್ತಿರುವ ಕೆಆರ್‌ಎಸ್, 2023ರ ಕರ್ನಾಟಕ ವಿಧಾನಸಭಾ ಚುನಾವಣೆಯಲ್ಲಿ ಯಾವುದೇ ಹಣ ಅಥವಾ ಆಮಿಷ ಬಳಸದೆ 195 ಕ್ಷೇತ್ರಗಳಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸಿತ್ತು. 2024ರ ಲೋಕಸಭಾ ಚುನಾವಣೆಯಲ್ಲಿ ರಾಜ್ಯದ ಎಲ್ಲ 28 ಕ್ಷೇತ್ರಗಳಲ್ಲಿಯೂ ಅಭ್ಯರ್ಥಿಗಳನ್ನು ಕಣಕ್ಕಿಳಿಸುವ ಮೂಲಕ ಸ್ವಚ್ಛ ರಾಜಕಾರಣದ ಬದ್ಧತೆಯನ್ನು ಪ್ರದರ್ಶಿಸಿದೆ ಎಂದು ಪಕ್ಷ ಹೇಳಿದೆ.

ಇದೀಗ ಮುಂಬರುವ ತಾಲೂಕು ಪಂಚಾಯತ್, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಬೃಹತ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಚುನಾವಣೆಗಳಲ್ಲಿ ಸಂಪೂರ್ಣ ಶಕ್ತಿಯೊಂದಿಗೆ ಸ್ಪರ್ಧಿಸಲು ಪಕ್ಷ ಸಂಘಟನೆಯನ್ನು ಸಜ್ಜುಗೊಳಿಸುತ್ತಿದೆ.

ಆಗಸ್ಟ್ 10ರಂದು ನಡೆಯಲಿರುವ ಸಮಾವೇಶಕ್ಕೆ ರಾಜ್ಯದ ಯುವಜನರು, ರೈತರು, ಕಾರ್ಮಿಕರು, ಮಹಿಳೆಯರು, ಪ್ರಜ್ಞಾವಂತ ನಾಗರಿಕರು ಹಾಗೂ ಪಕ್ಷದ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷ ಮನವಿ ಮಾಡಿದೆ.

# ಎಸ್‌ಐಆರ್ ಪಟ್ಟಿ: ಆ.17 ವರೆಗೆ ಮುಂದೂಡಿಕೆ :ಕೊಳಶೆಟ್ಟಿ

■ **ಉದಯರಶ್ಮಿ ದಿನಪತ್ರಿಕೆ**



ಚಡಚಣ: ನಿಜವಾದ ಮತದಾರರಿಗೆ ಅನ್ಯಾಯ ವಾಗಬಾರದು, ಎಲ್ಲ ಜನರು ತಮ್ಮ ತಮ್ಮ ಹೆಸರು ಮತ ಪಟ್ಟಿಯಲ್ಲಿ ನೋಂದಾಯಿಸಿಕೊಳ್ಳಲಿ ಅನ್ನೋ ಉದ್ದೇಶದಿಂದ ರಾಜ್ಯದ ಮುಖ್ಯ ಚುನಾವಣೆ ಅಧಿಕಾರಿಗಳು ಎಸ್. ಆಯ್. ಆರ್. ಪಟ್ಟಿ 17ರ ವರೆಗೆ ವಿಸ್ತರಣೆ ಮಾಡಲಾಗಿದೆ ಇಂಡಿ ವಿಧಾನ ಸಭಾ ಕ್ಷೇತ್ರದ ಜನರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಇಂಡಿ ಸಹಾಯಕ ಚುನಾವಣೆ ಅಧಿಕಾರಿಗಳು ನಾಗೇಂದ್ರ ಕೊಳಶೆಟ್ಟಿ ಪ್ರಕಟಣೆಗೆ ತಿಳಿಸಿದ್ದಾರೆ.

ಆ 17ರ ವರೆಗೆ ಮನೆ ಮನೆಗೆ ಭೇಟಿ ಅವಕಾಶ, ಆ 24ರಂದು ಮತದಾರರ ಕರಡು ಪಟ್ಟಿ ಪ್ರಕಟಣೆ, ಆ.24 ರಿಂದ ಸೆ. 23ರ ವರೆಗೆ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಅಥವಾ ತೆಗೆದುಹಾಕುವುದು ಸೇರಿದಂತೆ ಯಾವುದೆ ಹಕ್ಕುಗಳು ಮತ್ತು ಆಕ್ಷೇಪಣೆ ಸಲ್ಲಿಸಲು ಅವಕಾಶ, ಆಕ್ಷೇಪಣೆ ವಿಲೇವಾರಿ ಮತ್ತು ನೋಟೀಸ್ ಪ್ರಕ್ರಿಯೆ ಆ. 24 ರಿಂದ ಅ. 22 ರವರೆಗೆ, ಎಲ್ಲ ಕುಂದು ಕೊರತೆ ಪ್ರಕ್ರಿಯೆ ಮುಗಿದ ನಂತರ ಅಂತಿಮ ಮತದಾರರ ಪಟ್ಟಿಯನ್ನು ಅಕ್ಟೋಬರ್ 27ರಂದು ಅಧಿಕೃತವಾಗಿ ಪ್ರಕಟಿಸಲಾಗುವದು ಎಂದರು.

# ಬಸವಜ್ಯೋತಿಗೆ ಬಸವಶರಣ ಸಂಗಮ ಸೇವಾ ಸಮಿತಿ ಸ್ವಾಗತ



■ **ಉದಯರಶ್ಮಿ ದಿನಪತ್ರಿಕೆ**

ದೇವರಹಿಪ್ಪರಗಿ: ಪಟ್ಟಣಕ್ಕೆ ಕೂಡಲಸಂಗಮದಿಂದ ಆಗಮಿಸಿದ ಬಸವಜ್ಯೋತಿಯನ್ನು ಬಸವಶರಣ ಸಂಗಮ ಸೇವಾ ಸಮಿತಿಯ ಸದಸ್ಯರು ಸ್ವಾಗತಿಸುವುದರ ಮೂಲಕ ಮಡಿವಾಳ ಮಾಚಿದೇವ ದೇವಸ್ಥಾನದಲ್ಲಿ ಬೆಳಗಿಸಿ ನಂತರ ಬೀಳ್ಕೊಟ್ಟರು.

ಪ್ರತಿ ವರ್ಷದಂತೆ ಶನಿವಾರ ಮಡಿವಾಳ ಮಾಚಿದೇವ ದೇವಸ್ಥಾನ ಆವರಣ ಪ್ರವೇಶಿಸಿದ ಬಸವಜ್ಯೋತಿಗೆ ಭಕ್ತಿಪೂರ್ವಕ ಸ್ವಾಗತ ಕೋರಿದ ಬಸವಶರಣ ಸಂಗಮ ಸೇವಾ ಸಮಿತಿಯ ಸದಸ್ಯರು ಮಾಚಿದೇವನ ಪ್ರತಿಮೆಯ ಮುಂದೆ ಜ್ಯೋತಿ ಬೆಳಗಿಸಿದರು. ನಂತರ ಪ್ರಾರ್ಥನೆ ಸಲ್ಲಿಸಿ ಮಂಗಳಾರತಿ ನೆರವೇರಿಸಿದರು.

ಈ ಸಂದರ್ಭದಲ್ಲಿ ಜ್ಯೋತಿಯಾತ್ರೆಯ ನೇತೃತ್ವ ವಹಿಸಿದ ಶರಣ ಅಶೋಕ ಬೆಂಡಿಗೇರಿ ಮಾತನಾಡಿ, ಶ್ರಾವಣಮಾಸ ಆರಂಭಕ್ಕೂ ಮುನ್ನ ಕೂಡಲಸಂಗಮದಿಂದ ಹೊರಟ ಬಸವಜ್ಯೋತಿಯಾತ್ರೆ ಬಸವನ ಬಾಗೇವಾಡಿ ಸಹಿತ ಶರಣರ ಕ್ಷೇತ್ರಗಳನ್ನು ದರ್ಶಿಸಿ ನಂತರ ಬಸವಕಲ್ಯಾಣ ತಲುಪಲಿದೆ ಎಂದರು. ಈ ಸಂದರ್ಭದಲ್ಲಿ ಬಸವರಾಜ ಮೆಟಗಾರ ಪ್ರಸಾದ ಸೇವೆ ನೆರವೇರಿಸಿದರು. ನಂತರ ಬಸವಕಲ್ಯಾಣಕ್ಕೆ ಬೀಳ್ಕೊಡಲಾಯಿತು.

ಬಸವಶರಣ ಸಂಗಮ ಸೇವಾ ಸಮಿತಿ ಅಧ್ಯಕ್ಷ ಸಂಗಪ್ಪಣ್ಣ ತಡವಲ್, ಮುರುಗಯ್ಯ ಹಿರೇಮಠ, ರಾಮಯ್ಯ ನಾಶೀಮಠ, ಗೋಲ್ಲಾಳ ಬಿರಾದಾರ, ಶಾಂತಪ್ಪ ಪಡನೂರ ಸಹಿತ ಯಾತ್ರಿಕರು ಇದ್ದರು.

# ಇಂಡಿಯಲ್ಲಿ ಎಬಿವಿಪಿ ಕಾರ್ಯಕರ್ತರಿಂದ ತಿರಂಗಾ ಯಾತ್ರೆ




■ **ಉದಯರಶ್ಮಿ ದಿನಪತ್ರಿಕೆ**

ಇಂಡಿ: ನಗರದಲ್ಲಿ ಎಬಿವಿಪಿ ವತಿಯಿಂದ ಬಂಕಿಮ್ ಚಂದ್ರ ಚಟರ್ಜಿ ಅವರು ರಚಿಸಿದ ವಂದೇ ಮಾತರಂ ಗೀತೆಗೆ 150 ವರ್ಷಗಳು ಹಾಗೂ ಭಾರತಕ್ಕೆ 79 ನೇ ಸ್ವಾತಂತ್ರ್ಯ ಸಂಭ್ರಮದ ಹಿನ್ನೆಲೆಯಲ್ಲಿ ಶ್ರೀ ಶಾಂತೇಶ್ವರ ಪದವಿಪೂರ್ವ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಮತ್ತು ಎಬಿವಿಪಿ ಕಾರ್ಯಕರ್ತರು ಸೇರಿ 400 ಮೀಟರ್ ಉದ್ದದ ತಿರಂಗಾ ಯಾತ್ರೆ ನಡೆಸಿದರು.

ಯಾತ್ರೆಯು ಶ್ರೀ ಶಾಂತೇಶ್ವರ ಪದವಿಪೂರ್ವ ಮಹಾವಿದ್ಯಾಲಯದಿಂದ ವಿಜಯಪುರ ರಸ್ತೆ, ನಂತರ ಬಸವೇಶ್ವರ ವೃತ್ತ , ಅಂಬೇಡ್ಕರ ವೃತ್ತ ಸೇರಿದಂತೆ ನಗರದ ಪ್ರಮುಖ ಬೀದಿಗಳಲ್ಲಿ ಮೇರವಣಿಗೆ ನಡೆಸಿದರು.

ಎನ್.ಸಿ.ಸಿ, ಎನ್.ಎಸ್.ಎಸ್ ಮತ್ತು ಮಹಿಳಾ ಎಬಿವಿಪಿ ಪ್ರತಿನಿಧಿಗಳು ಪಾಲ್ಗೊಂಡಿದ್ದರು.

ಮೆರವಣಿಗೆಯಲ್ಲಿ ದೇಶದ ಪರ ಮತ್ತು ಸ್ವಾತಂತ್ರ ಹೋರಾಟಗಾರರ ಬಂಕಿಮ ಚಂದ್ರ ಚಟರ್ಜಿ ಸೇರಿದಂತೆ ಅನೇಕ ದೇಶ ಭಕ್ತರ ಜಯಘೋಷ ಹಾಕಿದರು.

ಎಬಿವಿಪಿ ಮುಖಂಡರಾದ ರಾಹುಲ ಜಾಧವ, ಹಣಮಂತ ಹಳ್ಳುರ, ಸಚಿನ ಧನಗೊಂಡ ಸತೀಶ ಹೊಟಗಿ, ಸೋಮನಾಥ ಕಟಗೇರಿ ನಿರ್ಮಲಾ, ಸ್ನೇಹಾ ಸೇರಿದಂತೆ ನೂರಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ನೀರಿನ ಅಭಾವ ತಗ್ಗಿಸಲು 32 ಕೊಳವೆ ಬಾವಿಗೆ ಕ್ರಮ :ಸಚಿವ ಯತಿಂದ್ರ

■ **ಉದಯರಶ್ಮಿ ದಿನಪತ್ರಿಕೆ**



ಎಚ್.ಡಿ.ಕೋಟೆ: ತಾಲ್ಲೂಕಿನ 38 ಗ್ರಾಮಗಳಲ್ಲಿ ನೀರಿನ ಸಮಸ್ಯೆ ತಲೆದೂರಿದ್ದು ತಾಲ್ಲೂಕು ಆಡಳಿತದ ವತಿಯಿಂದ 32 ಕೊಳವೆ ಬಾವಿಗಳನ್ನು ಕೊರೆಸಲಾಗಿದ್ದು ಶೀಘ್ರದಲ್ಲಿ ಕುಡಿಯು ನೀರಿನ ಸಮಸ್ಯೆಯನ್ನು ಬಗೆ ಹರಿಸಲಾಗುವುದು ಎಂದು ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ತಿಳಿಸಿದರು.

ಸಮೀಪದ ಚಿಕ್ಕರೆಯೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಾಮನಹಳ್ಳಿಹುಂಡಿಗೆ ಶನಿವಾರ ಭೇಟಿ ನೀಡಿ ಕುಡಿಯುವ ನೀರಿನ ಲಭ್ಯತೆ ಕುರಿತು ಪರಿಶೀಲನೆ ನಡೆಸಿ ಮಾತನಾಡಿದರು.

ತಾಲ್ಲೂಕಿನ 38 ಗ್ರಾಮಗಳಲ್ಲಿ ಕುಡಿಯುವ ನೀರಿನ ಕೊರತೆ ಇದ್ದರೂ ಸಹ ಕೇವಲ 32 ಬೋರ್ ಗಳನ್ನು ಕೊರೆಸಲಾಗಿದ್ದು ಅದರಲ್ಲಿ ಆರು ಬೋರ್ ಗಳಲ್ಲಿ ನೀರು ಬಂದಿಲ್ಲ, ಒಟ್ಟಾರೆ ಇನ್ನೂ ಸಹ 12 ಗ್ರಾಮಗಳಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸಲು ತಾಲ್ಲೂಕು ಆಡಳಿತ ವಿಫಲವಾಗಿದೆ ಎಂದು ಬೇಸರಿಸಿದರು.

ಈ ಭಾರಿ ಮಳೆಗಾಲದಲ್ಲೇ ನೀರಿನ ಸಮಸ್ಯೆ ತಲೆದೂರಿದ್ದು ಮುಂಬರುವ ಬೇಸಿಗೆ ದಿನಗಳನ್ನು ಅಧಿಕಾರಿಗಳು ಹೇಗೆ ಎದುರಿಸುತ್ತೀರಿ ಎಂದು ಅಧಿಕಾರಿಗಳಿಗೆ ಪ್ರಶ್ನಿಸಿದರು.

ರೈತರು ಬೆಳೆಗಳ ಬಗ್ಗೆ ಮಾತನಾಡಿದ ಸಚಿವರು ತಾಲ್ಲೂಕಿನಲ್ಲಿ ಮಳೆ ಅಭಾವದಿಂದ ನಿಗಧಿತ ಪ್ರಮಾಣದಲ್ಲಿ ಬಿತ್ತನೆಗಳನ್ನುಮಾಡಿಲ್ಲ, ಅಲ್ಪಾವಧಿ ಬೆಳೆಗಳನ್ನು ಮಾತ್ರ ಬೆಳೆದಿದ್ದು ಆ ಬೆಳೆಗಳು ಸಹ ಮಳೆಯ ಅಭಾವದಿಂದ ಮತ್ತು ರೋಗದಿಂದ ಅಪಾರ ಪ್ರಮಾಣದಲ್ಲಿ ಹಾನಿಯುಂಟಾಗಿದೆ, ಇದು ಇಡೀ ಜಿಲ್ಲೇಯಲ್ಲೇ ಕಂಡು ಬಂದ ದೃಶ್ಯವಾಗಿದ್ದು ಈ ಬಗ್ಗೆ ಮುಖ್ಯಮಂತ್ರಿಗಳಿಗೆ ವರದಿ ಸಲ್ಲಿಸಿ ರೈತರಿಗೆ ಸೂಕ್ತ ಪರಿಹಾರ ನೀಡುವಂತೆ ಒತ್ತಾಯಿಸಲಾಗುವುದು ಎಂದರು.

ಹಂಪಾಪುರ ಹೋಬಳಿಯಲ್ಲಿ ಇಬ್ಬಾಲ ಕೆರೆ ತುಂಬಿಸುವ ಯೋಜನೆಯಿಂದಾಗಿ 27 ಕೆರೆಗಳನ್ನು ತುಂಬಿಸಲಾಗಿದೆ, ಇನ್ನೂ 11 ಕೆರೆಗಳು ತುಂಬಿಸಲು ಕ್ರಮಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಉಳಿದಂತೆ ನೀರಾವರಿ ಸಚಿವರು ಸಹ ಸೂಚನೆಯನ್ನು ನೀಡಿದ್ದು ಹಾರಂಗಿಯಿಂದಲೂ ಸಹ ನಾಲೆಗಳ ಮೂಲಕ ನೀರನ್ನು ಹರಿಸಿ ಕೆರೆಗಳನ್ನು ತುಂಬಿಸಲಾಗುವುದು, ಇದರಿಂದ ಜನ ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆಯನ್ನು ನೀಗಿಸಬಹುದು, ಜೊತೆಗೆ ಅಂತರ್ಜಲ ಮಟ್ಟ ಚೇತರಿಸಿಕೊಳ್ಳಲಿದ್ದು ತೋಟಗಾರಿಕ ಬೆಳೆಗಳಿಗೆ ಅನುವಾಗಲಿದೆ ಎಂದರು.

ಗ್ರಾಮಗಳ ಬೇಟಿ ಕಡ್ಡಾಯ :

ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಅವರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳಿಗೂ ನಿಯಮಿತವಾಗಿ ತೆರಳಿ ನೀರಿನ ಕೊರತೆಯ ಬಗ್ಗೆ ಮಾಹಿತಿ ಕಲೆ ಹಾಕಬೇಕು, ಕುಡಿಯುವ ನೀರಿನ ತೊಂದರೆ ಕಂಡುಬಂದಲ್ಲಿ ಖುದ್ದು ತಾವೇ ನೀರು ಒದಗಿಸುವ ಮೂಲವನ್ನು ಕಂಡುಕೊಳ್ಳಬೇಕು, ಈ ಬಗ್ಗೆ ತಾಲ್ಲೂಕು ಆಡಳಿತ ಆಗಾಗ್ಗೆ ಪಿಡಿಓಗಳಿಂದ ಮಾಹಿತಿಯನ್ನು ಪಡೆದುಕೊಳ್ಳಬೇಕು, ಪಿಡಿಓಗಳು ತೆರಳಿಲ್ಲ ಎಂದು ತಿಳಿದರೆ ಅಂತಹವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

# ಕಾಲುವೆ ಸ್ವಚ್ಛಗೊಳಿಸಿ ನೀರು ಹರಿಸಲು ಆಗ್ರಹ :ಹೋರಾಟದ ಎಚ್ಚರಿಕೆ

■ **ಉದಯರಶ್ಮಿ ದಿನಪತ್ರಿಕೆ**



ಮುದ್ದೇಬಿಹಾಳ: ತಾಲೂಕಿನ ಚವನಭಾವಿ ಗ್ರಾಮದ ವ್ಯಾಪ್ತಿಯಲ್ಲಿ ರೈತರ ಜಮೀನುಗಳಿಗೆ ನೀರು ಪೂರೈಸುವ ಎಎಲ್‌ಬಿಸಿ ಕಾಲುವೆ (ಡಿಸ್ಟ್ರಿಬ್ಯೂಟರ್–39) ನಿರ್ವಹಣೆ ಕೊರತೆಯಿಂದ ಕಾಲುವೆಯಲ್ಲಿ ಹೂಳು, ಕಸ, ಕಲ್ಲುಗಳು ಹಾಗೂ ಮುಳ್ಳಿನ ಗಿಡಗಂಟಿಗಳು ಬೆಳೆದು ನೀರು ಸರಾಗವಾಗಿ ಹರಿಯದಂತಾಗಿದೆ ಎಂದು ರೈತರು ಆರೋಪಿಸಿದ್ದಾರೆ.

ತಾಲ್ಲೂಕಿನ ನಾಲತವಾಡ, ಅರೇಶಂಕರ, ಕಮಲಾಪುರ ಹಾಗೂ ಎಣ್ಣಿವಡಗೇರಿ ಮಾರ್ಗವಾಗಿ ಚವನಭಾವಿ ಗ್ರಾಮದ ರೈತರ ಜಮೀನುಗಳಿಗೆ ನೀರು ಪೂರೈಸುವ ಈ ಕಾಲುವೆಯ ಹಲವು ಭಾಗಗಳಲ್ಲಿ ಮಣ್ಣು, ಕಲ್ಲುಗಳು, ಆಪು ಹುಲ್ಲು ಹಾಗೂ ಗಿಡಗಂಟಿಗಳು ಬೆಳೆದು ನೀರಿನ ಹರಿವಿಗೆ ಅಡ್ಡಿಯಾಗಿವೆ. ಸುಮಾರು ಐದು ವರ್ಷಗಳಿಂದ ಕಾಲುವೆಯ ಹೂಳೆತ್ತುವ ಕಾರ್ಯ ನಡೆದಿಲ್ಲ ಎಂದು ರೈತರು ದೂರಿದ್ದಾರೆ.

ಸಧ್ಯ ಮಳೆ ಇಲ್ಲದೇ ಪರದಾಡುತ್ತಿರುವ ರೈತರು ನೀರಿಗಾಗಿ ಹವಣಿಸುತ್ತಿದ್ದು, ಈ ಕಾಲುವೆ ಅನುಕೂಲವಾಗುತ್ತಿದ್ದರೂ, ಸಮರ್ಪಕ ನೀರು ತಲುಪುಪದಿರುವ ಕಾರಣ ತಮ್ಮ ಬೆಳೆಗಳು ಹಾಳಾಗುವ ಆತಂಕ ಎದುರಾಗಿದೆ. ಅಲ್ಲದೇ ಇದೇ ಕಾಲುವೆ ನೀರನ್ನು ಅವಲಂಬಿಸಿರುವ ಜಾನುವಾರುಗಳಿಗೂ ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ. ನೀರಾವರಿ ಕಾಲುವೆಯನ್ನು ಸಮರ್ಪಕವಾಗಿ ನಿರ್ವಹಿಸದ ಕೆಬಿಜೆಎನ್‌ಎಲ್ ಅಧಿಕಾರಿಗಳ ವಿರುದ್ಧ ರೈತರು ಹರಿಹಾಯ್ದರು.

ಕೂಡಲೇ ಕಾಲುವೆಯಲ್ಲಿರುವ ಹೂಳು, ಕಸ, ಕಲ್ಲುಗಳು ಹಾಗೂ ಗಿಡಗಂಟಿಗಳನ್ನು ತೆರವುಗೊಳಿಸಿ, ಚವನಭಾವಿ ಗ್ರಾಮದ ರೈತರ ಜಮೀನುಗಳಿಗೆ ಸಮರ್ಪಕವಾಗಿ ನೀರು ಹರಿಸಬೇಕು. ಇಲ್ಲದಿದ್ದರೆ ಕೆಬಿಜೆಎನ್‌ಎಲ್ ಕಚೇರಿಗೆ ಮುತ್ತಿಗೆ ಹಾಕಿ ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ವೇಳೆ ಮಲ್ಲಪ್ಪ ಮಾಲಿನ, ಅಂಬ್ರೇಶ ನಾಲತವಾಡ, ಸಿದ್ದಪ್ಪ ಗುರಿಕಾರ, ಸಿದ್ದಪ್ಪ ಚಲವಾದಿ, ಹಣಮಂತ ಗೋಗಿ, ಲಕ್ಷ್ಮಣ ಈಳಗೇರ, ಶಿವಪ್ಪ ಕಾರಕೂರ, ಹಣಮಂತ ನಾಲತವಾಡ, ಯಮನಪ್ಪ ಬಿರಾದಾರ, ಸಂಗಪ್ಪ ಕುಂಬಾರ, ಗದ್ದೆಪ್ಪ ನಾಲತವಾಡ, ಲಕ್ಕಪ್ಪ ನಾಲತವಾಡ, ಮೌನೇಶ ಬಿರಾದಾರ, ಜಕ್ಕಪ್ಪ ನಾಲತವಾಡ, ಯಮನಪ್ಪ ಚಲವಾದಿ, ಭೀರಪ್ಪ ಮದರಿ, ಶಂಕ್ರಯ್ಯ ಹಿರೇಮಠ, ಶಿವಪ್ಪ ಮದರಿ ಸೇರಿದಂತೆ ಹಲವು ರೈತರು ಉಪಸ್ಥಿತರಿದ್ದರು.

# ವಾಸ್ತವಿಕ ಮಳೆ ಪ್ರಮಾಣದ ಬಗ್ಗೆ ತಪ್ಪು ವರದಿ :ರೈತರಿಗೆ ಅನ್ಯಾಯ

■ **ಉದಯರಶ್ಮಿ ದಿನಪತ್ರಿಕೆ**



ಇಂಡಿ: ವಿಜಯಪುರ ಜಿಲ್ಲೆಯಲ್ಲಿ ವಾಸ್ತವಿಕ ಮಳೆ ಪ್ರಮಾಣದ ಬಗ್ಗೆ ತಪ್ಪು ವರದಿ ಕಳಿಸಲಾಗುತ್ತಿದೆ. ಇದರಿಂದ ರೈತರಿಗೆ ಅನ್ಯಾಯವಾಗುವ ಸಾಧ್ಯತೆಯಿದೆ. ಕಾರಣ ಮೇಲಾಧಿಕಾರಿಗಳು ಈ ಬಗ್ಗೆ ಪರಿಶೀಲನೆ ಮಾಡಬೇಕೆಂದು ಕರ್ನಾಟಕ ರಕ್ಷಣಾ ವೇದಿಕೆಯ ಇಂಡಿ ತಾಲ್ಲೂಕು ಅಧ್ಯಕ್ಷ ಬಾಳು ಮುಳಜಿ ಆಗ್ರಹಿಸಿದರು.

ಅವರು ಶನಿವಾರ ನಗರದ ಖಾಸಗಿ ಹೋಟೆಲ್ ಆವರಣದಲ್ಲಿ ಏರ್ಪಡಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ವಿಜಯಪೂರ ಜಿಲ್ಲೆಯಲ್ಲಿ ಸಮರ್ಪಕವಾಗಿ ಮಳೆಯಾಗಿದೆ ಎಂದು ಹವಾಮಾನ ಇಲಾಖೆ ನೀಡಿರುವ ವರದಿ ವಾಸ್ತವಿಕ ಪರಿಸ್ಥಿತಿಗೆ ವಿರುದ್ಧವಾಗಿದೆ. ಜಿಲ್ಲೆಯಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದೇ ರೈತರು ಸಂಕಷ್ಟದಲ್ಲಿದ್ದರೂ, ಮಳೆಯಾಗಿದೆ ಎಂದು ತಪ್ಪು ವರದಿ ನೀಡಿರುವುದರಿಂದ ರೈತರಿಗೆ ಭಾರೀ ಅನ್ಯಾಯವಾಗುವ ಸಾಧ್ಯತೆ ಇದೆ. ಈ ತಪ್ಪು ವರದಿಯಿಂದ ಜಿಲ್ಲೆಯನ್ನು ಬರಪೀಡಿತ ಜಿಲ್ಲೆ ಎಂದು ಘೋಷಿಸುವ ಪ್ರಕ್ರಿಯೆಗೆ ತೊಂದರೆಯಾಗಬಹುದು. ರೈತರಿಗೆ ದೊರೆಯಬೇಕಾದ ಬರ ಪರಿಹಾರದಿಂದ ವಂಚಿತರಾಗಬಹುದು. ಹವಾಮಾನ ಆಧಾರಿತ ತೋಟಗಾರಿಕೆ ಬೆಳೆಗಳ ವಿಮಾ ಪರಿಹಾರವೂ ಸಿಗದಂತಾಗಬಹುದು.

ರೈತರ ಬೆಳೆ ನಷ್ಟದ ವಾಸ್ತವಿಕ ಪರಿಸ್ಥಿತಿ ಸರ್ಕಾರದ ಗಮನಕ್ಕೆ ಬಾರದಿರುವ ಸಾಧ್ಯತೆ ಆಗುವದು ಎಂದಿದ್ದಾರೆ.

ಜಿಲ್ಲೆಯ ಹಲವು ಭಾಗಗಳಲ್ಲಿ ಮಳೆ ಮಾಪನ ಕೇಂದ್ರಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂಬ ಆರೋಪಗಳೂ ಕೇಳಿಬರುತ್ತಿವೆ. ಕೆಲವು ಮಳೆ ಮಾಪನ ಕೇಂದ್ರಗಳಲ್ಲಿ ದಾಖಲಾಗಿರುವ ಮಳೆ ಪ್ರಮಾಣ ಮತ್ತು ವಾಸ್ತವಿಕವಾಗಿ ಸುರಿದ ಮಳೆಯ ಪ್ರಮಾಣದಲ್ಲಿ ವ್ಯತ್ಯಾಸವಿದೆ ಎಂಬುದು ರೈತರ ಆತಂಕಕ್ಕೆ ಕಾರಣವಾಗಿದೆ.

ಆದ್ದರಿಂದ ಜಿಲ್ಲಾಧಿಕಾರಿಗಳು ಕೂಡಲೇ ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ, ಜಿಲ್ಲೆಯ ಎಲ್ಲಾ ಮಳೆ ಮಾಪನ ಕೇಂದ್ರಗಳ ಕಾರ್ಯವೈಖರಿಯನ್ನು ಪರಿಶೀಲಿಸಬೇಕು. ಅಗತ್ಯವಿದ್ದಲ್ಲಿ ಸ್ಥಳ ಪರಿಶೀಲನೆ ನಡೆಸಿ, ಸ್ವತಂತ್ರವಾಗಿ ನೈಜ ಮಳೆ ಪ್ರಮಾಣದ ಮಾಹಿತಿಯನ್ನು ಸಂಗ್ರಹಿಸಿ, ಅಧಿಕೃತ ಹಾಗೂ ವಾಸ್ತವಿಕ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಬೇಕು.

ಜಿಲ್ಲೆಯಲ್ಲಿ ನಿಜವಾಗಿಯೂ ಮಳೆಯ ಕೊರತೆ ಇದ್ದರೆ, ವಾಸ್ತವಿಕ ಅಂಕಿ–ಅಂಶಗಳ ಆಧಾರದ ಮೇಲೆ ಜಿಲ್ಲೆಯನ್ನು ಬರಪೀಡಿತ ಜಿಲ್ಲೆ ಎಂದು ಘೋಷಿಸಿ, ರೈತರಿಗೆ ದೊರೆಯಬೇಕಾದ ಬರ ಪರಿಹಾರ, ಬೆಳೆ ವಿಮೆ ಹಾಗೂ ಇತರೆ ಸಕರ್ಣಾಟಿಜಜಜಿಟಿಜಜರಿ ಸೌಲಭ್ಯಗಳನ್ನು ತಕ್ಷಣ ಒದಗಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

ರೈತರ ಬದುಕಿನೊಂದಿಗೆ ಸಂಬಂಧಿಸಿದ ಇಂತಹ ಗಂಭೀರವಿಚಾರದಲ್ಲಿಯಾವುದೇತಪ್ಪುಅಂಕಿ–ಅಂಶಗಳಿಂದ ರೈತರಿಗೆ ಅನ್ಯಾಯವಾಗಬಾರದು. ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಕ್ರಮ ಕೈಗೊಂಡು ನೈಜ ಮಳೆ ಪ್ರಮಾಣದ ಅಧಿಕೃತ ವರದಿಯನ್ನು ಬಹಿರಂಗಪಡಿಸಬೇಕು.

ಈ ಕುರಿತು ತಕ್ಷಣ ಕ್ರಮ ಕೈಗೊಳ್ಳದಿದ್ದಲ್ಲಿ, ರೈತರ ಹಿತದೃಷ್ಟಿಯಿಂದ ಶಾಂತಿಯುತ ಹೋರಾಟ ನಡೆಸುವುದು ಅನಿವಾರ್ಯವಾಗಲಿದೆ ಎಂದು ಎಚ್ಚರಿಕೆ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ಮಹೇಶ ಹೂಗಾರ, ಶಿವಾನಂದ ಚಾಳಿಕಾರ, ಭೀಮನಗೌಡ ಪಾಟೀಲ, ಪ್ರಶಾಂತ ಲಾಳಸಂಗಿ, ಪ್ರವೀಣ ಪೊದ್ದಾರ, ಸಂದೇಶ ಗಲಗಲಿ, ಸಚಿನ್ ನಾವಿ, ಶಿವಾನಂದ ಮಡಿವಾಳ ಸೇರಿದಂತೆ ಇನ್ನಿತರರು ಇದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR